# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 195 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 19–02–2024 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 01 Issue - 195 | Title- Code: KARKAN 28269 | Chitradurga | Date: 19-02-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಿತ್ರದುರ್ಗ ನಗರಸಭೆ ಬಜೆಟ್ ಸಿದ್ಧತೆ ರೂ.112.78 ಕೋಟಿ ಆಯವ್ಯಯ ಮಂಡನೆ 2

ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗಪುರುಷ ಸವಿತಾ ಮಹರ್ಷಿ 3

ಸಂವಿಧಾನದ ತಿಳುವಳಿಕೆ ಅಕ್ಷರಭ್ಯಾಸದಲ್ಲಿಯೇ ಬರಬೇಕು: ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಗ್ಯಾರಂಟಿ ಯೋಜನೆಗಳ ಸಾರ್ಥಕ ಸಮಾವೇಶದಲ್ಲಿ ಸಚಿವ ಡಿ.ಸುಧಾಕರ್

# ಬಡವರಿಗಾಗಿ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಗ್ಯಾರಂಟಿ ಯೋಜನೆ ಜಾರಿ

» ಚಿತ್ರದುರ್ಗ

ಬಡವರಿಗಾಗಿ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗುವುದು. ಸಾರ್ವಜನಿಕರ ಹಣ ಬಡವರು, ದೀನದಲಿತರು ಸೇರಿದಂತೆ ಎಲ್ಲ ವರ್ಗದವರಿಗೂ ತಲುಪಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದ ಬೋರಪ್ಪ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದ ಕುರಿತು 'ಐಮಂಗಲ ಹೋಬಳಿ ಮಟ್ಟದ ಸಮಾವೇಶ" ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ನಾಲ್ಕು ಗ್ಯಾರಂಟಿ ಯೋಜನೆಗಳನ್ನು ಮಹಿಳೆಯರಿಗೆ ನೀಡಲಾಗಿದೆ. ಶೇ.98ರಷ್ಟು ಮಹಿಳೆಯರು ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದಿದ್ದಾರೆ. ಗ್ಯಾರಂಟಿ ಯೋಜನೆಗಳಿಂದ ಬಡವರು ಸ್ವಾವಲಂಬನೆಯಿಂದ ಸಮರ್ಥವಾಗಿ ಕುಟುಂಬ ಹಾಗೂ ಜೀವನ ನಿರ್ವಹಣೆ ಮಾಡುತ್ತಿದ್ದಾರೆ. ಇನ್ನೂ 5 ವರ್ಷಗಳ ಕಾಲ ಗ್ಯಾರಂಟಿ ಯೋಜನೆಗಳು ಮುಂದುವರೆಯಲಿವೆ. ಇದರ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೂ ಒತ್ತು ನೀಡಲಾಗುವುದು ಎಂದರು. ನಮ್ಮ ಸರ್ಕಾರ ಚುನಾವಣೆಗೂ ಮುನ್ನ ಜನರಿಗೆ ನೀಡಿದ ಆಶ್ವಾಸನೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ತಿಳಿಸಿದ ಅವರು, ಗ್ಯಾರಂಟಿ ಯೋಜನೆಗಳ ಮುಂದುವರಿಕೆ ಜತೆಗೆ ಅಭಿವೃದ್ಧಿ ಕಾರ್ಯವನ್ನೂ ಮಾಡಲಾಗುವುದು. ಈಚೆಗೆ ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಸುಮಾರು 100 ಕೋಟಿ ಅನುದಾನ ನೀಡಲಾಗಿದೆ. ಅವಶ್ಯಕತೆ ಇರುವ ಕಡೆ ಅಭಿವೃದ್ಧಿಗೆ ಅನುದಾನ ನೀಡಲಾಗುತ್ತದೆ ಎಂದು ಹೇಳಿದರು.

ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ. ಹಿರಿಯೂರು ತಾಲ್ಲೂಕಿನಲ್ಲಿ ಅನ್ನಭಾಗ್ಯ ಯೋಜನೆಯಡಿ 65,019 ಕುಟುಂಬಗಳು, ಗೃಹಲಕ್ಷ್ಮೀ ಯೋಜನೆಯಡಿ 66,014 ಫಲಾನುಭವಿಗಳು, ಗೃಹಜ್ಯೋತಿ ಯೋಜನೆಯಡಿ 64,778 ಕುಟುಂಬಗಳು ಪ್ರಯೋಜನಪಡೆದಿವೆ.ಶಕ್ತಿಯೋಜನೆಯಡಿ ಮಹಿಳೆಯರುಸರ್ಕಾರದಸಾರಿಗೆಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ಹಿರಿಯೂರು ತಾಲ್ಲೂಕಿನಲ್ಲಿ ಯುವನಿಧಿ ಯೋಜನೆಯಡಿ 517ಕ್ಕೂ ಹೆಚ್ಚು ಫಲಾನುಭವಿಗಳು ನೋಂದಣಿಯಾಗಿದ್ದಾರೆ ಎಂದು ಮಾಹಿತಿ ನೀಡಿದ ಅವರು, ತಾಂತ್ರಿಕ ಕಾರಣಗಳಿಂದ ಗ್ಯಾರಂಟಿ ಯೋಜನೆಗಳಿಂದ ಫಲಾನುಭವಿಗಳು ಹೊರಗುಳಿದಿದ್ದು, ಅಂತಹವರು ಅಗತ್ಯ ದಾಖಲಾತಿಗಳನ್ನು ಸಂಬಂಧಪಟ್ಟ ಇಲಾಖೆಗೆ ತಲುಪಿಸಿದರೆ ನಿಯಮಾನುಸಾರ ಕ್ರಮವಹಿಸಿ ಗ್ಯಾರಂಟಿ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ ಎಂದರು.

ಕಾರ್ಯಕ್ರಮಕ್ಕೆಆಗಮಿಸಿದ್ದಫಲಾನುಭವಿ ಐಮಂಗಲ ಹೋಬಳಿ ಪಾಲವ್ವನಹಳ್ಳಿಯ ಶಾರದಮ್ಮ ತನ್ನ ಅನಿಸಿಕೆ ವ್ಯಕ್ತಪಡಿಸಿ, ವಯಸ್ಸಾದ ಕಾರಣಕ್ಕೆ ಕೂಲಿ ಕೆಲಸಕ್ಕೂ ನನ್ನನ್ನು ಯಾರು ಕರೆಯುತ್ತಿರಲಿಲ್ಲ. ನನ್ನ ಇಬ್ಬರು ಮಕ್ಕಳು ಮೃತಪಟ್ಟಿದ್ದು, ಜಮೀನು ಸಹ ಇಲ್ಲ. ಹಾಗಾಗಿ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಸಾಕಷ್ಟು ಅನುಕೂಲವಾಗಿದೆ. ಮನೆಯ ಯಜಮಾನಿಗೆ ರೂ.2000 ನೀಡುವ ಗೃಹಲಕ್ಷ್ಮೀ ಯೋಜನೆಯ ಹಣವನ್ನು ಔಷಧೋಪಚಾರಕ್ಕೆ ಬಳಸುತ್ತಿದ್ದೇನೆ. ಇದರಿಂದ ಸಾಕಷ್ಟು ಅನುಕೂಲವಾಗಿದೆ ಎಂದರು. ನನ್ನ ತವರು ಮನೆ ಹಾಸನ ಜಿಲ್ಲೆ. ಯಾವುದಾದರೂ ಕಾರ್ಯಕ್ರಮಗಳಿಗೆ ಕರೆದಾಗ ಹಣದ ಸಮಸ್ಯೆಯಿಂದಾಗಿ ಹೋಗಲು ಸಾಧ್ಯವಾಗುತ್ತಿರಲಿಲ್ಲ. ಇದೀಗ ಶಕ್ತಿ ಯೋಜನೆಯಡಿ ಆಧಾರಕಾರ್ಡ್ ಇಟ್ಟುಕೊಂಡು ಉಚಿತವಾಗಿ 4 ಬಾರಿ ಹಾಸನ ಜಿಲ್ಲೆಗೆ ಹೋಗಿ ಬಂದಿದ್ದೇನೆ ಎಂದು ಸಂತಸ ವ್ಯಕ್ತಪಡಿಸಿದರು. ಹಸಿದವರಿಗೆ ಅನ್ನಭಾಗ್ಯ ಯೋಜನೆ, ಗೃಹಜ್ಯೋತಿ ಯೋಜನೆಯಡಿ 200 ಯೂನಿಟ್‌ವರೆಗೂ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಇದರಿಮದ ಬಡಜನರಿಗೆ ಸಾಕಷ್ಟು ಅನುಕೂಲವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಸಹಾಯಕ ಕಾರ್ಯಪಾಲಕ ಅಭಿಯಂತರ ಅಸ್ಲಾಂಬಾಷಾ, ಬೆಸ್ಕಾಂ ಎಇಇ ಪೀರ್‌ಸಾಬ್, ತಾಲ್ಲೂಕು ಆರೋಗ್ಯಾಧಿಕಾರಿ ವೆಂಕಟೇಶ್ ಸೇರಿದಂತೆ ಮುಖಂಡರಾದ ಈರಲಿಂಗೇಗೌಡ, ಹೆಚ್.ಮಹಂತೇಶ್, ಕೃಷ್ಣಮೂರ್ತಿ, ತಿಪ್ಪೇಸ್ವಾಮಿ, ಜಯಣ್ಣ, ಟಿ.ಎಲ್.ಬಸವರಾಜಪ್ಪ, ಸಿದ್ದೇಶ್ವರ್, ಷಡಾಕ್ಷರಿ, ಐಮಂಗಲ ಹೋಬಳಿಯ ವಿವಿಧ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಫಲಾನುಭವಿಗಳು ಇದ್ದರು. ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಾಘವೇಂದ್ರ ಸ್ವಾಗತಿಸಿದರು.





## ಐಮಂಗಲ ಬಹುಗ್ರಾಮ ಕುಡಿಯುವ ನೀರು ಯೋಜನೆಗೆ ಸಚಿವ ಡಿ.ಸುಧಾಕರ್ ಚಾಲನೆ

» ಚಿತ್ರದುರ್ಗ

ವಾಣಿವಿಲಾಸ ಜಲಾಶಯದಿಂದ ಐಮಂಗಲ ಹೋಬಳಿ ವ್ಯಾಪ್ತಿಯ 30 ಹಳ್ಳಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವ ಐಮಂಗಲ ಬಹುಗ್ರಾಮ ಕುಡಿವ ನೀರಿನ ಯೋಜನೆಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ ನೀಡಿದರು.

ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದಲ್ಲಿ ಭಾನುವಾರ ವಿ.ವಿ.ಸಾಗರ ಜಲಾಶಯದಿಂದ ಶುದ್ಧಿಕರಿಸಿದ ಶುದ್ಧ ಕುಡಿಯುವ ನೀರನ್ನು ಐಮಂಗಲ ಮತ್ತು ಇತರೆ 30 ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಹಂತ–1ರ ರೂ.26.37 ಕೋಟಿ ವೆಚ್ಚದ ಕಾಮಗಾರಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಫ್ಲೋರೈಡ್ ನೀರಿನ ಸಮಸ್ಯೆಯಿಂದ ಮುಕ್ತಿಗೊಳಿಸಲು ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸಲಾಗಿದ್ದು, ಬಹುದಿನದ ಕನಸು ನನಸಾಗಿರುವುದು ಸಂತಸ ತಂದಿದೆ ಎಂದರು.

ಹಿರಿಯೂರು ತಾಲ್ಲೂಕಿನಲ್ಲಿ ಮಾರಿಕಣಿವೆ ಜಲಾಶಯವಿದ್ದರೂ ಐಮಂಗಲ ಹೋಬಳಿಯ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿರಲಿಲ್ಲ. ಈ ಹಿನ್ನಲೆಯಲ್ಲಿ ಮಾರಿಕಣಿವೆಯ 800 ಅಡಿ ಮೇಲೆ ಗುಡ್ಡದ ಮೇಲೆ 16 ಲಕ್ಷ ಸಾಮಾರ್ಥ್ಯದ ನೀರಿನ ಟ್ಯಾಂಕರ್ ನಿರ್ಮಿಸಿ, ಗ್ರ್ಯಾವಿಟಿ ಆಧಾರದ ಮೇಲೆ ಐಮಂಗಲ ಹೋಬಳಿಯ ವ್ಯಾಪ್ತಿಯ ಸೂರಗೊಂಡನಹಳ್ಳಿ, ಐಮಂಗಲ, ಮೇಟಿಕುರ್ಕೆ, ಬುರುಜನರೊಪ್ಪ, ಮರಡಿಹಳ್ಳಿ, ಎಂ.ಡಿ.ಕೋಟೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಸುಮಾರು 30 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಮುಂದಿನ ಒಂದು ವರ್ಷದ ವೇಳೆಗೆ ಹಿರಿಯೂರಿನ ತಾಲ್ಲೂಕಿನ ಸುಮಾರು 300 ಹಳ್ಳಿಗಳಿಗೆ ವಾಣಿವಿಲಾಸ ಸಾಗರ ಜಲಾಶಯದಿಂದ ಕುಡಿಯುವ ನೀರು ಹರಿಸಲು ಕ್ರಮವಹಿಸಲಾಗುವುದು. ಈ ನಿಟ್ಟಿನಲ್ಲಿ ಕುಡಿಯುವ ನೀರಿನ ಕಾಮಗಾರಿಗೆ ಈಗಾಗಲೇ ಟೆಂಡರ್ ಕರೆಯಲಾಗಿದೆ. ಇದೊಂದು ದೊಡ್ಡ ದಾಖಲೆಯ ಸಂಗತಿ. ಜಿಲ್ಲೆಯ ಆರು ತಾಲ್ಲೂಕುಗಳು ಬರಪೀಡಿತಪ್ರದೇಶಗಳುಎಂದುಘೋಷಣೆಯಾಗಿರುವುದರಿಂದ ಜಿಲ್ಲೆಯ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಲಾಗುವುದು. ಕುಡಿಯುವ ನೀರಿನ ತೊಂದರೆ ಇರುವ ಗ್ರಾಮಗಳಿಗೆ ಬೋರ್‌ವೆಲ್ ಕೊರೆಸುವ ವ್ಯವಸ್ಥೆ ಅಥವಾ ಟ್ಯಾಂಕರ್‌ಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆಗೆ ಅಗತ್ಯ ಕ್ರಮವಹಿಸಲಾಗುವುದು ಎಂದು ಹೇಳಿದರು.



## ಫಾಸ್ಟ್ ನ್ಯೂಸ್

### ಫೆ. 19ರಂದು ಸಿದ್ದಯ್ಯನಕೋಟೆಯಲ್ಲಿ ಜನಪರ ಉತ್ಸವ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇದೇ ಫೆ. 19ರಂದು ಸಂಜೆ 4ಕ್ಕೆ ಮೊಳಕಾಲ್ಮೂರು ತಾಲ್ಲೂಕಿನ ಸಿದ್ದಯ್ಯನಕೋಟೆಯ ಶ್ರೀ ಚಿತ್ತರಗಿ ಶ್ರೀ ವಿಜಯ ಮಹಾಮತೇಶ್ವರ ಶಾಖಾಮಠದಲ್ಲಿ ಜನಪರ ಉತ್ಸವ–2024 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶ್ರೀ ಚಿತ್ತರಗಿ ಶ್ರೀ ವಿಜಯ ಮಹಾಮತೇಶ್ವರ ಶಾಖಾಮಠದ ಗುರು ಮಹಾಂತ ಮಹಾಸ್ವಾಮಿಗಳು, ಶ್ರೀ ಬಸವಲಿಂಗ ಮಹಾಸ್ವಾಮಿಗಳು ದಿವ್ಯಸಾನಿಧ್ಯ ವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಘನಉಪಸ್ಥಿತಿ ವಹಿಸುವರು. ಶಾಸಕ ಎನ್.ವೈ. ಗೋಪಾಲಕೃಷ್ಣ ಕಾರ್ಯಕ್ರಮ ಉದ್ಘಾಟಿಸುವರು.

ರಾಯಪುರ ಗ್ರಾ.ಪಂ ಅಧ್ಯಕ್ಷೆ ಪಾರ್ವತಮ್ಮ ಬೋಸಯ್ಯ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಅಶೋಕ ಎನ್ ಛಲವಾದಿ, ಮೊಳಕಾಲ್ಮೂರು ತಹಶೀಲ್ದಾರ್ ಟಿ.ಜಗದೀಶ್, ತಾ.ಪಂ ಕಾರ್ಯನಿರ್ವಾಹಕಾಧಿಕಾರಿ ಎಂ.ಆರ್.ಪ್ರಕಾಶ್, ರಾಯಪುರ ಗ್ರಾ.ಪಂ ಪಿಡಿಓ ನೂರುಲ್ಲಾ, ಉಪಾಧ್ಯಕ್ಷ ಬೋರಯ್ಯ, ಸಿದ್ದಯ್ಯನಕೋಟೆ ಗ್ರಾ.ಪಂ ಸದಸ್ಯರಾದ ಮೀನಾಕ್ಷಿ ಕೊಲ್ಲಾರಪ್ಪ, ಮಂಜಣ್ಣ, ಡಿ.ಬಸವರಾಜ್, ಕವಿತಾ ಪಿ. ಮೂರ್ತಿ, ಭಾಗವಹಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ. ಮಲ್ಲಿಕಾರ್ಜುನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಫೆ.20ರಂದು ಕವಿ ಸರ್ವಜ್ಞ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕುಂಬಾರ ಗುಂಡಯ್ಯ ಮಹಾಸಂಸ್ಥಾನ, ಚಿತ್ರದುರ್ಗ ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಇವರ ಸಂಯುಕ್ತಾಶ್ರಯದಲ್ಲಿ ಕವಿ ಸರ್ವಜ್ಞ ಜಯಂತಿ ಆಚರಣೆ ಸಮಾರಂಭವನ್ನು ಇದೇ ಫೆ.20 ರಂದು ಮಧ್ಯಾಹ್ನ 12 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕುಂಬಾರ ಗುರುಪೀಠದ ಶ್ರೀ ಬಸವಮೂರ್ತಿ ಕುಂಬಾರ ಗುಂಡಯ್ಯ ಸ್ವಾಮೀಜಿ ದಿವ್ಯ ಸಾನಿಧ್ಯವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉಧ್ಘಾಟಿಸುವರು. ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ ಗೋವಿಂದಪ್ಪ, ಟಿ. ರಘುಮೂರ್ತಿ, ಡಾ. ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಕುಂಬಾರ ಗುಂಡಯ್ಯ ಮಹಾಸಂಸ್ಥಾನ ಅಧ್ಯಕ್ಷ ಕೆ.ಚಂದ್ರಪ್ಪ, ಕಾರ್ಯದರ್ಶಿ ಎ.ಎನ್. ಮಹಾಂತೇಶಪ್ಪ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್. ಎರ್ರಿಸ್ವಾಮಿ, ಕಾರ್ಯದರ್ಶಿ ವೈ.ಮೃತ್ಯುಂಜಯ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಅಧ್ಯಕ್ಷೆ ಎಸ್.ಬೈಲಮ್ಮ, ಕಾರ್ಯದರ್ಶಿ ಹೇಮಾವತಿ ಹಾಗೂ ಜಿಲ್ಲೆಯ ಗೌರವಾನ್ವಿತ ಜನಪ್ರತಿನಿಧಿಗಳು, ಕುಂಬಾರ ಸಮಾಜದ ಗೌರವಾನ್ವಿತ ಮುಖಂಡರು, ಗಣ್ಯರು ಭಾಗವಹಿಸುವರು.

## ಪ್ರಮುಖ ಸುದ್ದಿ

### ಪರಶುರಾಮಪುರ ಹೋಬಳಿಯ ನಾಗಗೊಂಡನಹಳ್ಳಿ ರಥೋತ್ಸವಕ್ಕೆ ಸಾವಿರಾರು ಭಕ್ತರು ಭಾಗಿ

# ಭವ್ಯವಾಗಿ ನಡೆದ ಚಲುಮೆರುದ್ರಸ್ವಾಮಿ ರಥೋತ್ಸವ

» ಚಳ್ಳಕೆರೆ

ವೇದವತಿ ನದಿತಟದಲ್ಲಿ ನೆಲೆಸಿರುವ ಶ್ರೀಚಲುಮೆರುದ್ರಸ್ವಾಮಿಯ ಭವ್ಯ ರಥೋತ್ಸವ ಮಾಗಶುದ್ದು ದಶಮಿ ನಕ್ಷತ್ರದ ಶುಭಗಳಿಗೆಯ ಭಾನುವಾರ ಸಾವಿರಾರು ಭಕರ ಸಮ್ಮುಖದಲ್ಲಿ ಭವ್ಯವಾಗಿ ನಡೆಯಿತು.

ತಾಲ್ಲೂಕಿನ ನಾಗಗೊಂಡನಹಳ್ಳಿ ಗ್ರಾಮದ ಶ್ರೀಚಲುಮೆರುದ್ರಸ್ವಾಮಿ ಜಾತ್ರೆಗೆ ಕರ್ನಾಟಕವ್ಹೂ ಸೇರಿದಂತೆ ಆಂದ್ರಪ್ರದೇಶದಿಂದಲ್ಲೂ ಸಾವಿರಾರು ಭಕರು ಆಗಮಿಸಿ ದೇವರ ದರ್ಶನ ಪಡೆದು ಪುನಿತರಾದರು. ರಥೋತ್ಸವ ಸಾಗುವ ದಾರಿಯುದ್ದಕ್ಕೂ ಬಾಳೆಹಣ್ಣು, ಸೂರಬೆಲ್ಲ, ಹೂ, ರೈತ ತಾನು ಬೆಳೆದ ಬೆಳೆಯನ್ನು ರಥಕ್ಕೆ ಅರ್ಪಿಸುವ ಮೂಲಕ ಮಳೆ, ಹೊಲಗದ್ದೆಗಳಲ್ಲಿ ಸಮೃದ್ಧ ಬೆಳೆ, ರೋಗರುಜನೆಗಳಿಂದ ಕಾಪಾಡುವಂತೆ ಬೇಡುತ್ತಾರೆ. ನಂತರ ದೇವರಸ್ಥಾನದಲ್ಲಿ ದೇವರಿಗೆ ನೈವೇದ್ಯವಾದ ಮೊಳಕೆಕಟ್ಟಿದ ಸಜ್ಜೆ, ಬೆಲ್ಲ, ಅಕ್ಕಿ, ಶೇಂಗಾದಿಂದ ಮಿಶ್ರಿತವಾದ ಪ್ರಸಾದವನ್ನು ವಿತರಿಸಲಾಗುತ್ತದೆ.



ಐತಿಹ್ಯ:– ಚಿತ್ರದುರ್ಗ ಕೇವಲ ರಾಜಮನೆಗಳ ಆಳ್ವಿಕೆಗೆ ಮಾತ್ರ ಸೀಮಿತವಾಗದೆ ಹಲವಾರು ಪವಾಡ ಪುರುಷರು ಈ ಭಾಗದಲ್ಲಿ ಜನರ ಕಲ್ಯಾಣಾರ್ಥ ಪವಾಡಗಳು ನಡೆಸಿದ್ದಾರೆ. ಅದರಂತೆ ಚಲುಮೇರುದ್ರಸ್ವಾಮಿಯೂ ಲೋಕಸಂಚಾರಿಯಾಗಿ ನಾಗಗೊಂಡನಹಳ್ಳಿಗೆ ಬಂದರು ಗ್ರಾಮದ ಪಕ್ಕದಲ್ಲೇ ಹರಿಯುವ ವೇದಾವತಿ ನದಿಯ ತಟದಲ್ಲೇ ಇದ್ದ ಶಿವನ ದೇವಾಲಯದಲ್ಲಿ ಸೇವೆ ಮಾಡುತ್ತಾ, ಇಲ್ಲಿನ ಸುತ್ತಮುತ್ತಲಿನ ಜನರು ನದಿ ಬಳಿಗೆ ದನಕಾಯಲು ಬರುತ್ತಿದ್ದ ಜನರು ಸ್ವಾಮಿಗೆ ಹಾಲು ನೀಡುವ ಮೂಲಕ ಸಂತೈಸುತ್ತಿದ್ದರು. ಇದಕ್ಕೆ ಪ್ರತಿಯಾಗಿ ಸ್ವಾಮಿ ತಮ್ಮ ಬೆತ್ತದಿಂದ ನದಿಯಲ್ಲಿನ ಮರಳನ್ನು ಮುಟ್ಟಿ ಪ್ರಸಾದವನ್ನಾಗಿ ಮಾಡಿ ಉಣಬಡಿಸುವ ಪವಾಡ ಮಾಡುತ್ತಿದ್ದರು ಎಂಬ ಪ್ರತೀತಿ ಇದೆ. ಚಲುಮೇರುದ್ರಸ್ವಾಮಿ ಗ್ರಾದ ಬಳಿ ವೇದಾವತಿ ನದಿಯ ದಡದ ಪಕ್ಕ ಜೀವ ಸಮಾಧಿಯಾಗಿ ಇಂದಿಗೂ ಭಕ್ತರ ಕಷ್ಟಕಾರ್ಪಣ್ಯಗಳಿಗೆ ನೆರವಾಗುತ್ತಾರೆ ಎಂಬ ನಂಬಿಕೆ ಭಕ್ತರದ್ದು.

ಪುಟ 2

## ಫಾಸ್ಟ್ ನ್ಯೂಸ್

### ಮಿಷನ್ ಶಕ್ತಿ ಯೋಜನೆ: ಜೆಂಡರ್ ಸ್ಪೆಷಲಿಸ್ಟ್ ಹುದ್ದೆ ನೇಮಕಾತಿ ರದ್ದು

» ಚಿತ್ರದುರ್ಗ

ಚಿತ್ರದುರ್ಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಮಿಷನ್ ಶಕ್ತಿ ಯೋಜನೆಯಡಿ ಲಿಂಗ ತಜ್ಞರು (ಜೆಂಡರ್ ಸ್ಪೆಷಲಿಸ್ಟ್) ಹುದ್ದೆಯ ನೇಮಕಾತಿಯನ್ನು ಕೈ ಬಿಡಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಮಿಷನ್ ಶಕ್ತಿ ಯೋಜನೆಯಡಿ ಮಹಿಳಾ ಸಬಲೀಕರಣ ಘಟಕಕ್ಕೆ 2023-24ನೇ ಸಾಲಿಗೆ ಗುತ್ತಿಗೆ ಆಧಾರದ ಮೇಲೆ ಸೇವೆ ಪಡೆಯಲು ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲು ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಫೆ.6 ರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಫೆ.20 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಫೆ.05 ರಂದು ಹೊರಡಿಸಿದ್ದ ಪ್ರಕಟಣೆಯಲ್ಲಿ 01 ಜಿಲ್ಲಾ ಯೋಜನಾ ಸಂಯೋಜಕ (ಡಿಸ್ಟ್ರಿಕ್ಟ್ ಮಿಷನ್ ಕೋಆಡಿನೇಟರ್), 01 ಹಣಕಾಸು ಸಾಕ್ಷರತೆ ಹಾಗೂ ಲೆಕ್ಕಿಗ ತಜ್ಞ (ಸ್ಪೆಷಲಿಷ್ಟ್ ಇನ್ ಪಿನ್ಯಾಸಿಯಲ್ ಲಿಟ್ರಸಿ ಅಂಡ್ ಅಕೌಂಟೆಟ್) ಹುದ್ದೆಗಳಿಗೆ ಮಾತ್ರ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲಾಗುತ್ತದೆ. ಲಿಂಗ ತಜ್ಞರು (ಜೆಂಡರ್ ಸ್ಪೆಷಲಿಷ್ಟ್) ಹುದ್ದೆಯ ನೇಮಕಾತಿ ಪ್ರಕ್ರಿಯೆ ಕೈ ಬಿಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒನಕೆ ಓಬವ್ವ ಸ್ಟೇಡಿಯಂ ಹತ್ತಿರ, ಜಿಲ್ಲಾ ಬಾಲಭವನ ಆವರಣ, ಚಿತ್ರದುರ್ಗ, ದೂರವಾಣಿ ಸಂಖ್ಯೆ 08194-235259 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ: ಸಾಲಸೌಲಭ್ಯಕ್ಕೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅಲ್ಪಸಂಖ್ಯಾತ ಜನಾಂಗದವರ ಏಳಿಗೆಗಾಗಿ ಸ್ವಯಂ ಉದ್ಯೋಗ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಫೆ.29 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಜಿಯನ್ನು https://kmdconline.karnataka.gov.in ಜಾಲತಾಣದ ಮೂಲಕ ಸಲ್ಲಿಸಬಹುದಾಗಿದೆ. ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದ, ಸಿಖ್, ಪಾರ್ಸಿಗಳು ಹಾಗೂ ಆಂಗ್ಲೋ ಇಂಡಿಯನ್ ಜನಾಂಗದ ಏಳಿಗೆಗಾಗಿ ಈ ಯೋಜನೆಯಡಿ ಅಲ್ಪಸಂಖ್ಯಾತ ಸಮುದಾಯ ಜನರಿಗೆ ವ್ಯಾಪಾರ, ಸಣ್ಣ ಪ್ರಮಾಣದ ಗುಡಿ ಕೈಗಾರಿಕೆ, ಕೃಷಿ ಆಧಾರಿತ ಚಟುವಟಿಕೆ ಮುಂತಾದವುಗಳನ್ನು ಪ್ರಾರಂಭಿಸಲು ಸಾಲ ಮತ್ತು ಸಹಾಯಧನವಾಗಿ ಘಟಕದ ವೆಚ್ಚ ಶೇ.33% ಅಥವಾ ಗರಿಷ್ಠ ರೂ.1ಲಕ್ಷದವರೆಗೆ ಸಹಾಯಧನ ನೀಡಲಾಗುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾಗಿರಬೇಕು. ಕರ್ನಾಟಕದ ನಿವಾಸಿಯಾಗಿರಬೇಕು. ಕನಿಷ್ಠ 18 ವರ್ಷ ಮೇಲ್ಪಟ್ಟು 55 ವರ್ಷದೊಳಗಿರಬೇಕು. ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದವರಿಗೆ ರೂ.81,000/- ಹಾಗೂ ನಗರ ಪ್ರದೇಶದಲ್ಲಿ ರೂ.1,03,000 ಮೀರಿರಬಾರದು. ಅರ್ಜಿದಾರರ ಕುಟುಂಬದ ಯಾವುದೇ ಸದಸ್ಯರು ಕೆಂದ್ರ, ರಾಜ್ಯ ಸರ್ಕಾರಿ, ಪಿಎಸ್‌ಯು ಉದ್ಯೋಗಿಯಾಗಿರಬಾರದು. ಕೆ.ಎಂ.ಡಿ.ಸಿಯಲ್ಲಿ ಸುಸ್ಥಿರರಾಗಿರಬಾರದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಅಥವಾ ದೂರವಾಣಿ ಸಂಖ್ಯೆ 08194-226412, 8277944213 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಡಿಯುವ ನೀರು । ಸಮಸ್ಯೆ ನಿರ್ವಹಣೆಗೆ ಸಹಾಯವಾಣಿ ಪ್ರಾರಂಭ

» ಚಿತ್ರದುರ್ಗ

ಜಿಲ್ಲೆಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ, ತ್ವರಿತವಾಗಿ ಸ್ಪಂದಿಸುವಂತಾಗಲು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ 08194-222538 ಪ್ರಾರಂಭಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳು ಎಂಬುದಾಗಿ ಸರ್ಕಾರ ಘೋಷಿಸಿದ್ದು, ಬರಪೀಡಿತ ತಾಲ್ಲೂಕು ವ್ಯಾಪ್ತಿಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಈಗಾಗಲೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ, ಸಾರ್ವಜನಿಕರು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಸಾರ್ವಜನಿಕ ಕುಂದುಕೊರತೆ ಕೋಶದಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಸಂಖ್ಯೆ 08194-222538 ಸಂಖ್ಯೆಗೆ ಕರೆ ಮಾಡಿ, ತಮ್ಮ ಸಮಸ್ಯೆಗಳನ್ನು ದಾಖಲಿಸಬಹುದಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಚಿತ್ರದುರ್ಗ ನಗರಸಭೆ ಬಜೆಟ್ ಸಿದ್ಧತೆ

# ರೂ.112.78 ಕೋಟಿ ಆಯವ್ಯಯ ಮಂಡನೆ

### ರಸ್ತೆ, ಚರಂಡಿ, ಕುಡಿಯುವ ನೀರು, ನೈರ್ಮಲೀಕರಣ, ನಗರ ಸೌಂದರ್ಯೀಕರಣಕ್ಕೆ ಹೆಚ್ಚಿನ ಅನುದಾನ ಮೀಸಲು

» ಚಿತ್ರದುರ್ಗ



ಚಿತ್ರದುರ್ಗ ನಗರಸಭೆಯ 2024-25ನೇ ಸಾಲಿನ ಬಜೆಟ್‌ಗೆ ಸಂಬಂಧಿಸಿದ ಅಗತ್ಯ ಸಿದ್ದತೆಗಳನ್ನು ಪೌರಾಯುಕ್ತೆ ಎಂ.ರೇಣುಕಾ ಕೈಗೊಂಡಿದ್ದಾರೆ. ಈ ಬಾರಿ ರೂ.112.78 ಕೋಟಿ ಆಯವ್ಯಯ ಮಂಡನೆಯಾಗಲಿದ್ದು, ರಸ್ತೆ, ಚರಂಡಿ, ಕುಡಿಯುವ ನೀರು, ನೈರ್ಮಲೀಕರಣ, ನಗರ ಸೌಂದರ್ಯೀಕರಣಕ್ಕೆ ಹೆಚ್ಚಿನ ಅನುದಾನ ಮೀಸಲಿರಿಸಲಾಗಿದೆ.

ಇಲ್ಲಿನ ನಗರಸಭೆ ಕೌನ್ಸಿಲ್ ಸಭಾಂಗಣದಲ್ಲಿ ಶನಿವಾರ ಈ ಕುರಿತು ನಗರಸಭೆ ಸದಸ್ಯರು ಹಾಗೂ ಸಾರ್ವಜನಿಕರೊಂದಿಗೆ ಸಮಾಲೋಚನೆ ಸಭೆ ನಡೆಯಿತು.ಆಸ್ತಿ ತೆರಿಗೆ, ನೀರಿನ ಶುಲ್ಕ, ಬಾಡಿಗೆ, ಉದ್ದಿಮೆ ಪರವಾನಿಗೆ, ಅಭಿವೃದ್ಧಿ ಶುಲ್ಕ ಹಾಗೂ ಇತರೆ ಆದಾಯಗಳು ಸೇರಿ ಒಟ್ಟು ರೂ.30.53 ಕೋಟಿ ನಗರಸಭೆಯ ಸ್ವಂತ ಆದಾಯವಿದೆ. ಇದರೊಂದಿಗೆ ರಾಜ್ಯ ಸರ್ಕಾರದಿಂದ ಎಸ್.ಎಫ್.ಸಿ, ನಗರೋತ್ಥಾನ ಹಾಗೂ ಡಿಎಂಎಫ್‌ಟಿ ಶಾಸಕರ ಅನುದಾನ ಸೇರಿ ರೂ.71.20 ಕೋಟಿ ಅನುದಾನ ನಗರಸಭೆಗೆ ದೊರಕಲಿದೆ. ಹಾಗೂ ಕೇಂದ್ರ ಸರ್ಕಾರದ 15ನೇ ಹಣಕಾಸು, ನಲ್ಮ್, ಸ್ವಚ್ಛ ಭಾರತ್ ಮಿಷನ್ ಹಾಗೂ ಇತರೆ ಅನುದಾನಗಳಿಡಿ ಅಡಿ ರೂ.11.05 ಕೋಟಿ ಅನುದಾನ ನಗರಸಭೆ ಲಭ್ಯವಾಗಲಿದ್ದು, ಒಟ್ಟು ರೂ.112.78 ಕೋಟಿ ಆದಾಯದ ನಿರೀಕ್ಷೆಯೊಂದಿಗೆ ಆಯವ್ಯಯ ಮಂಡನೆಗೆ ಸಿದ್ಧತೆ ನಡೆಸಿಕೊಳ್ಳಲಾಗಿದೆ.

ನಗರದ ಬೀದಿ ದೀಪ, ನೀರು ಸರಬರಾಜು, ನಗರಸಭೆ ಸಂಬಂಧಿಸಿದ ಕಚೇರಿ, ಕಟ್ಟಡ, ಗ್ರಂಥಾಲಯಗಳ ವಿದ್ಯುತ್ ಪಾವತಿಗಾಗಿ ರೂ.21 ಕೋಟಿ ಅನುದಾನ ಮೀಸಲಿರಿಸಲಾಗಿದೆ. ನಗರದ ರಸ್ತೆಗಳ ಅಭಿವೃದ್ಧಿಗಾಗಿ ರೂ.18.75 ಕೋಟಿ, ತಾಜ್ಯ ನಿರ್ವಹಣೆ, ತಾಜ್ಯ ಸಂಗ್ರಹಣೆ ವಾಹನಗಳು, ಶೌಚಾಲಯಗಳ ಅಭಿವೃದ್ಧಿ, ಹೊರಗುತ್ತಿಗೆ ನೌಕರರ ವೇತನ, ಇಂಧನ ಸೇರಿ ನಗರದ ನೈರ್ಮಲೀಕರಣ ಕಾರ್ಯಗಳಿಗೆ ಒಟ್ಟು ರೂ.13.50 ಕೋಟಿ, ನಗರಸಭೆಯ ಸಿಬ್ಬಂದಿ ವೇತನಕ್ಕಾಗಿ ರೂ.10 ಕೋಟಿ, ನಗರದ ಸೌಂದರ್ಯೀಕರಣ, ಆಟೋರಿಕ್ಷಾ ನಿಲುಗಡೆ, ಪಾರ್ಕಿಂಗ್, ಖಾಸಗಿ ಬಸ್ ನವೀಕರಣ, ನಾಮಫಲಕಗಳ ಅಳವಡಿಕೆ, ನಗರ ಪ್ರಮುಖ ವೃತ್ತಗಳ ಅಭಿವೃದ್ಧಿಗಾಗಿ ಒಟ್ಟು ರೂ.7 ಕೋಟಿ ಅನುದಾನಗಳನ್ನು ಪ್ರಮುಖವಾಗಿ ಆಯವ್ಯಯದಲ್ಲಿ ಒದಗಿಸಲಾಗಿದೆ.

ನಗರದ ಚರಂಡಿ ಹಾಗೂ ಒಳಚರಂಡಿಗಳ ನಿರ್ಮಾಣ ಹಾಗೂ ನಿರ್ವಹಣೆಗಾಗಿ ರೂ.9 ಕೋಟಿ, ನೀರು ನಿರ್ವಹಣೆ ಮತ್ತು ಅಭಿವೃದ್ಧಿ ಕಾಮಗಾರಿಗಳು, ದಾಸ್ತಾನು ಖರೀದಿ ಹಾಗೂ ಹೊರಗುತ್ತಿಗೆ ನೌಕರರ ವೇತನಕ್ಕಾಗಿ ರೂ.8 ಕೋಟಿ, ಉದ್ಯಾನವನ ಮತ್ತು ರುದ್ರಭೂಮಿ ಅಭಿವೃದ್ಧಿಗೆ ರೂ.3.25 ಕೋಟಿ, ಬೀದಿ ದೀಪಗಳ ಅಳವಡಿಕೆಗೆ ರೂ.3 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಇರಿಸಲಾಗಿದೆ.

ಕಚೇರಿ ವೆಚ್ಚಗಳ ನಿರ್ವಹಣೆಗೆ ರೂ.3.75 ಕೋಟಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ವಿಶೇಷ ಚೇತನರ ಕಲ್ಯಾಣಕ್ಕಾಗಿ ರೂ.1.50 ಕೋಟಿ, ಸ್ವಚ್ಛ ಭಾರತ್ ಮಿಷನ್‌ಗೆ ರೂ.1.50ಕೋಟಿ, ಜಾಹೀರಾತು ಹಾಗೂ ಇತರೆ ವೆಚ್ಚಗಳಿಗೆ ರೂ.1 ಕೋಟಿ, ಹಾಗೂ ನಲ್ಮ್ ಯೋಜನೆಗೆ ರೂ.50 ಲಕ್ಷ ಅನುದಾನ ಆಯವ್ಯಯದಲ್ಲಿ ಖರ್ಚಾಗುವ ನಿರೀಕ್ಷೆಯಿದೆ.

ರಾಜ್ಯ ಸರ್ಕಾರಕ್ಕೆ ರೂ.3.75 ಕೋಟಿ ಸೆಸ್ ಹಾಗೂ ರೂ.1 ಕೋಟಿ ಬಾಕಿ ಪಾವತಿಯನ್ನು ಈ ಬಾರಿಯ ಆಯವ್ಯಯದಲ್ಲಿ ಮಾಡಲಾಗುವುದು.

ನಗರ ಹಸರೀಕರಣಕ್ಕೆ ಪಣ : ಈ ಹಿಂದೆ ನಗರದ ಅಭಿವೃದ್ಧಿಗಾಗಿ ಹೆಚ್ಚಿನ ಗಿಡ ಮರಗಳನ್ನು ಕಡೆಯಲಾಗಿದೆ. ನಗರದಲ್ಲಿ ಗಿಡ ಮರಗಳನ್ನು ಬೆಳೆಸಲು ನಗರಸಭೆಯಿಂದ ಯೋಜನೆ ರೂಪಿಸುವಂತೆ ನಗರಸಭಾ ಸದಸ್ಯರು ಸಭೆಯಲ್ಲಿ ಸಲಹೆ ನೀಡಿದರು.

ನಗರಸಭೆ ವತಿಯಿಂದ ಉದ್ಯಾನವನ ಸೇರಿದಂತೆ ನಗರಸಭೆ ವ್ಯಾಪ್ತಿಯ ಜಾಗಗಳಲ್ಲಿ ಗಿಡಗಳ ನೆಡಲು ಕ್ರಮವಹಿಸಲಾಗುವುದು. ಇದರ ಜೊತೆಗೆ ಟಾರ್ಗೆಟ್ ಯುವ ವೇದಿಕೆ ನೆಟ್ಟ ಗಿಡಗಳ ರಕ್ಷಣೆಗೆ ನಗರಸಭೆ ಕ್ರಮ ಕೈಗೊಂಡಿದೆ. ಈ ಗಿಡಗಳಿಗೆ ಎಸ್.ಟಿ.ಪಿ ಪ್ಲಾಂಟ್‌ಗಳಲ್ಲಿ ಶುದ್ಧೀಕರಿಸಿ ನೀರನ್ನು ಉಣಿಸಲು ಪ್ರತ್ಯೇಕವಾಗಿ ಟ್ಯಾಂಕರ್ ಮೀಸಲಿಡಲಾಗುವುದು ಎಂದು ಪೌರಾಯುಕ್ತೆ ರೇಣುಕಾ.ಎಂ ತಿಳಿಸಿದರು.

ಪ್ರಮುಖ ವೃತ್ತಗಳ ಅಭಿವೃದ್ಧಿ : ಈ ಬಾರಿಯ ಆಯ್ಯವಯದಲ್ಲಿ ನಗರದ ಪ್ರಮುಖ ವೃತ್ತಗಳ ಅಭಿವೃದ್ಧಿ ಅನುದಾನ ಮೀಸಲಿಡಲಾಗಿದೆ. ನಗರದ ಪ್ರಮುಖ ವೃತ್ತಗಳಲ್ಲಿ ಪುತ್ಥಳಿಗಳಿಗೆ ಚಾವಣಿ ನಿರ್ಮಾಣ, ಕೈದೋಟ, ವಿದ್ಯುತ್ ದೀಪಾಲಂಕಾರ, ಸಂಚಾರಿ ದೀಪಗಳನ್ನು ಅಳವಡಿಸುವುದಾಗಿ ಪೌರಾಯುಕ್ತೆ ರೇಣುಕಾ.ಎಂ ಹೇಳಿದರು. ನಗರದಲ್ಲಿ ಆಧುನಿಕ ನಾಮಫಲಕಗಳನ್ನು ಅಳವಡಿಸಲಾಗುವುದು. ಈಗಾಗಲೇ ಸಾರ್ವಜನಿಕ ಮನವಿಯಂತೆ ಡಿವೈಡರ್‌ಗಳನ್ನು ತೆರವುಗೊಳಿಸಲಾಗಿದೆ ಎಂದರು.

22 ಹೊಸ ಕಸ ಸಂಗ್ರಹಣೆಯ ಆಟೋ ಟಿಪ್ಪರ್ ಖರೀದಿ ಟೆಂಡರ್ : ನಗರದ ಕಸ ಸಂಗ್ರಹಣೆಯನ್ನು ಸಮರ್ಪಕವಾಗಿ ಕೈಗೊಳ್ಳಲು ಅನುಕೂಲವಾಗುವಂತೆ ಹೊಸದಾಗಿ 22 ಕಸ ಸಂಗ್ರಹಣೆಯ ಆಟೋ ಟಿಪ್ಪರ್ ಖರೀದಿಗೆ ಶೀಘ್ರವೇ ಟೆಂಡರ್ ಕರೆಯಲಾಗುವುದು. ಪ್ರಸ್ತುತ 31 ಆಟೋ ಟಿಪ್ಪರ್‌ಗಳು ಇದ್ದು, ಕಸ ಸಂಗ್ರಹಿಸುತ್ತಿವೆ. ಇದರಲ್ಲಿ 10 ರಿಂದ 12 ವಾಹನಗಳು ನಿರುಪಯುಕ್ತವಾಗಿವೆ. ನಗರದಲ್ಲಿ ಒಟ್ಟು 35 ವಾರ್ಡ್‌ಗಳಿದ್ದು, ಪ್ರತಿ ವಾರ್ಡ್‌ಗೂ ಪ್ರತ್ಯೇಕವಾಗಿ ಒಂದೊಂದು ಕಸ ಸಂಗ್ರಹಣೆಯ ಆಟೋ ಟಿಪ್ಪರ್‌ಗಳನ್ನು ನಿಗಧಿಪಡಿಸಲಾಗುವುದು. ಏಪ್ರಿಲ್ 1 ರಿಂದ ಈ ವಾಹನಗಳು ಕಾರ್ಯರಂಭ ಮಾಡಲಿವೆ. ನಗರಸಭೆಯ ಬಳಿ 2 ನೀರಿನ ಟ್ಯಾಂಕ್‌ರ್‌ಗಳಿಗೆ ನಗರಕ್ಕೆ ಕನಿಷ್ಠ 5 ಟ್ಯಾಂಕರ್‌ಗಳ ಅವಶ್ಯಕತೆ ಇದ್ದು, ಈ ಬಾರಿಯ ಅಯವ್ಯಯದಲ್ಲಿ 3 ಹೊಸ ಟ್ಯಾಂಕರ್ ಖರೀದಿಸಲಾಗುವುದು. ಇದರೊಂದಿಗೆ ಹೊಸದಾಗಿ ಇನ್ನೊಂದು ಮುಕ್ತಿ ವಾಹನವನ್ನು ಖರೀದಿಸುವುದಾಗಿ ಪೌರಾಯುಕ್ತೆ ರೇಣುಕಾ.ಎಂ ಸ್ಪಷ್ಟನೆ ನೀಡಿದರು.ಸಭೆಯಲ್ಲಿ ನಗರಸಭೆ ಸದಸ್ಯರಾದ ಜಿ.ಹರೀಶ್, ಕೆ.ಮಂಜುಳಾ, ಶಕೀಲಬಾನು, ಭಾಗ್ಯಮ್ಮ, ಎಸ್.ಜಯಪ್ಪ, ಎಂ.ಪಿ.ಅನಿತ, ಮಹಮ್ಮದ್ ದಾವುದ್, ಮೊಹಮ್ಮದ್ ಜೈಲಾಬ್‌ದ್ದೀನ್, ಸುಮಿತಾ.ಬಿ.ಎನ್, ದೀಪಕ್.ಜೆ.ಎಸ್, ಎಸ್.ಸಿ.ತಾರಕೇಶ್ವರಿ, ನಗರಸಭೆಯ ಮುಖ್ಯ ಲೆಕ್ಕಾಧಿಕಾರಿ ಮೆಹಬೂಬ್ ಅಲಿ, ಇತರೆ ಅಧಿಕಾರಿಗಳಾದ ರಘುವೀರ್, ಕೆ.ಪುಟ್ಟಪ್ಪ ಸೇರಿದಂತೆ ಇತರೆ ಅಧಿಕಾರಿಗಳು, ಸಾರ್ವಜನಿಕರು ಇದ್ದರು.

# ಮಕ್ಕಳಲ್ಲಿರುವ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಬಾಲವಿಕಾಸ ಅಕಾಡೆಮಿ ಕಾರ್ಯ ಉತ್ತಮ

» ಚಿತ್ರದುರ್ಗ



ಮಕ್ಕಳಲ್ಲಿರುವ ಸೂಪ್ತ ಪ್ರತಿಭೆ ಹೊರಹಾಕುವ ನಿಟ್ಟಿನಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯು ಜಿಲ್ಲೆಯಲ್ಲಿರುವ ಪ್ರತಿಯೊಬ್ಬ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ವೇದಿಕೆ ನೀಡುವ ನಿಟ್ಟಿನಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಭಾರತಿ ಆರ್ ಬಣಕಾರ್ ಹೇಳಿದರು. ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಮಕ್ಕಳ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ಮಕ್ಕಳು ತಮ್ಮಲ್ಲಿರುವ ಪ್ರತಿಭೆಗಳಾದ ಚಿತ್ರಕಲೆ, ಕ್ಲೇ ಮಾಡ್ಲಿಂಗ್, ಕಥೆ, ಕವನ, ಮಕ್ಕಳ ಸಾಹಿತ್ಯ ಚಟುವಟಿಕೆಗಳು ಮತ್ತು ಪಾರಂಪರಿಕ ಕಲೆಗಳಾದ ಭರತನಾಟ್ಯ ಛದ್ಮವೇಷ ಮುಂತಾದ ಕಲಾಪ್ರಕಾರಗಳನ್ನು ಉಳಿಸುವ ನಿಟ್ಟಿನಲ್ಲಿ ಮಕ್ಕಳಿಗೆ ಉತ್ತೇಜನ ನೀಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದರು. ಮಕ್ಕಳಲ್ಲಿರುವ ಪ್ರತಿಭೆ ಅನಾವರಣಗೊಳಿಸುವುದು, ಪ್ರತಿಯೊಂದು ಮಗುವು ಪ್ರತಿಯೊಂದು ಕ್ಷೇತ್ರದಲ್ಲಿ ವಿಶೇಷತೆ ಹೊಂದಿರುತ್ತದೆ. ಆ ವಿಶೇಷತೆಯನ್ನು ಗುರುತಿಸಿ ವೇದಿಕೆಯನ್ನು ಕಲ್ಪಿಸಿ ಆ ಮಗುವಿಗೆ ಉತ್ತಮ ಸಂಸ್ಕಾರ ನೀಡುವ ನಿಟ್ಟಿನಲ್ಲಿ ಈ ಮಕ್ಕಳ ಹಬ್ಬವು ಪೂರಕವಾಗಿದೆ. ಜಿಲ್ಲೆಯ ಮಕ್ಕಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಉತ್ತಮ ಹೆಸರು ಗಳಿಸಬೇಕು. ರಿಯಾಲಿಟಿ ಶೋಗಳಲ್ಲಿ ಅವಕಾಶ ದೊರೆತಿಲ್ಲ ಎಂದು ತಮ್ಮಲ್ಲಿರುವ ಕಲೆ ಮರೆಮಾಚದೆ ಇಂತಹ ವೇದಿಕೆಗಳಲ್ಲಿ ತಮ್ಮ ಕಲೆ ಪ್ರದರ್ಶನಗೊಳಿಸಿದರೆ ತಮಗೆ ಸ್ಫೂರ್ತಿಯಾಗುತ್ತದೆ. ಅದೇ ರೀತಿಯಾಗಿ ಇದೇ ಫೆ. 28ರಂದು ನಗರದ ತ.ರಾ.ಸು ರಂಗಮಂದಿರದಲ್ಲಿ ಕಲಾತಂಡಗಳ ಪ್ರದರ್ಶನ ಹಾಗೂ ಮಕ್ಕಳಿಗೆ ಪ್ರಮಾಣ ಪತ್ರವನ್ನೂ ಸಹ ವಿತರಿಸಲಾಗುತ್ತದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ ಮಾತನಾಡಿ, ಇಲಾಖೆ ವತಿಯಿಂದ ಮಕ್ಕಳಿಗೆ ಬೇಸಿಗೆ ಸಂದರ್ಭದಲ್ಲಿ ವಿವಿಧ ಸೃಜನಾತ್ಮಕ ಚಟುವಟಿಕೆಗಳನ್ನೂ ಸಹ ಹಮ್ಮಿಕೊಂಡಿರುತ್ತೇವೆ. ಮಕ್ಕಳಲ್ಲಿರುವ ಪ್ರತಿಭೆಗಳನ್ನು ಹೊರಹಾಕುವ ನಿಟ್ಟಿನಲ್ಲಿ ಅನೇಕ ಕೆಲಸಗಳನ್ನು ಮಾಡುತ್ತಿದ್ದೇವೆ. ಇದರ ಸದುಪಯೋಗ ಪಡೆದುಕೊಳ್ಳಬೇಕು. ಮಕ್ಕಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿದರೆ ಜ್ಞಾನಾರ್ಜನೆಗೆ ಪೂರಕವಾಗುತ್ತದೆ ಎಂದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಶಿಕ್ಷಕರಾದ ಸುನಂದಮ್ಮ, ವಸಂತಕುಮಾರಿ ಕಾರ್ಯಕ್ರಮ ಕುರಿತು ಮಾತನಾಡಿದರು. ಕಾರ್ಯಕ್ರಮ ಸಂಯೋಜಕ ಡಿ.ಶ್ರೀ ಕುಮಾರ್ ಇದ್ದರು.

### ಚಲುಮೆರುದ್ರಸ್ವಾಮಿ ರಥೋತ್ಸವ

» ಮೊದಲ ಪುಟದಿಂದ

ಸ್ವಾಮಿ ಹಸಿ ಶೇಂಗಾ, ಸಜ್ಜೆ ಹಾಗೂ ಅಕ್ಕಿಯನ್ನು ನೆನಸಿ ಅದಕ್ಕೆ ಬೆಲ್ಲಬೆರಸಿ ದಿನನಿತ್ಯ ಸೇವಿಸುತ್ತಿದ್ದರು. ಅದುವೆ ಇಂದು ಅಲ್ಲಿನ ಪ್ರಸಾದವಾಗಿದೆ ಎನ್ನುತ್ತಾರೆ ಸ್ವಾಮಿ ವಿವೇಕಾನಂದ ಸಮಾಜ ಸೇವಾ ಸಂಸ್ಥೆ ಅಧ್ಯಕ್ಷ ಎ.ಚಳ್ಳೇಶ್.ಜಾತ್ರೆಯಲ್ಲಿ ಪಾಲ್ಗೊಂಡಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ತಾಲ್ಲೂಕಿನ ಪ್ರಸಿದ್ದ ಜಾತ್ರಾ ಉತ್ಸವಗಳಲ್ಲಿ ಒಂದಾದ ನಾಗಗೊಂಡನಹಳ್ಳಿ ಶ್ರೀಚಲುಮೆರುದ್ರಸ್ವಾಮಿ ಜಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದಿದೆ. ಕಳೆದ ಹಲವಾರು ವರ್ಷಗಳಿಂದ ಈ ಪುಣ್ಯಕಾರ್ಯವನ್ನು ಭಕ್ತರು ಭಕ್ತಿಶ್ರದ್ದೆಯಿಂದ ಆಚರಣೆ ಮಾಡುತ್ತಾ ಬಂದಿದ್ದಾರೆ. ದೇವರ ಉತ್ಸವದಿಂದ ಪ್ರತಿಯೊಬ್ಬರೂ ಉತ್ತಮ ಸನ್ಮಾರ್ಗದಲ್ಲಿ ನಡೆಯಲು ಸಾಧ್ಯವಾಗುತ್ತದೆ ಎಂದರು. ಶ್ರೀಸ್ವಾಮಿಯ ಮುಕ್ತಿಬಾವುಟವನ್ನು ಹರಾಜು ಮಾಡಲಾಗಿ ತಾಲ್ಲೂಕಿನ ಭರಮಸಾಗರ ರೈತ ಸೋಮಶೇಖರಪ್ಪ 45 ಸಾವಿರಕ್ಕೆ ಮುಕ್ತಿಬಾವುಟ ಪಡೆದರು. ಬಸವಲಿಂಗಸ್ವಾಮೀಜಿ, ಡಿ.ಸೋಮಶೇಖರಮಂಡಿಮಠ, ಬಾಳೆಮಂಡಿರಾಮದಾಸ್, ರಾಘವೇಂದ್ರ, ಚಳ್ಳೇಶ್, ತಿಪ್ಪೇರುದ್ರಪ್ಪ ಮುಂತಾದವರು ಭಾಗವಹಿಸಿದ್ದರು.



ಚಳ್ಳಕೆರೆ ತಾಲ್ಲೂಕಿನ ನಾಗಗೊಂಡನಹಳ್ಳಿ ಗ್ರಾಮದ ಶ್ರೀಚೆಲುಮೆರುದ್ರಸ್ವಾಮಿ ಭವ್ಯ ರಥೋತ್ಸವದಲ್ಲಿ ಶಾಸಕ ಟಿ. ರಘುಮೂರ್ತಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ರಥಸಪ್ತಮಿ ಅಂಗವಾಗಿ 108 ಸೂರ್ಯನಮಸ್ಕಾರ ಪ್ರದರ್ಶನ

» ಚಿರ್ತದುರ್ಗ



ರಥಸಪ್ತಮಿ ದಿನದ ಅಂಗವಾಗಿ ಶುಕ್ರವಾರ ಜಿಲ್ಲೆಯಾದ್ಯಂತ ಸೂರ್ಯದೇವನಿಗೆ ವಿಶೇಷ ಪೂಜೆ, ಅಗ್ನಿಹೋತ್ರ, 108 ಸೂರ್ಯನಮಸ್ಕಾರಗಳೊಂದಿಗೆ ಅರ್ಘ್ಯವನ್ನು ಸಮರ್ಪಿಸಲಾಯಿತು. ಚಿತ್ರದುರ್ಗ ಆಯುಷ್ ಇಲಾಖೆ ಹಾಗೂ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಜಂಟಿಯಾಗಿ ನಗರದ ವೆಂಕಟೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶುಕ್ರವಾರ ಬೆಳಗ್ಗೆ 5 ಗಂಟೆಗೆ ಸರಿಯಾಗಿ ಅಗ್ನಿಹೋತ್ರ ಹೋಮದೊಂದಿಗೆ ಯೋಗ ಗುರು ರವಿ ಅಂಬೇಕರ್ ಮಾರ್ಗದರ್ಶನದಲ್ಲಿ ಹಲವಾರು ಯೋಗ ಸಾಧಕರಿಂದ 108 ಸೂರ್ಯನಮಸ್ಕಾರಗಳ ಪ್ರದರ್ಶನ ನೀಡಲಾಯಿತು, ನಂತರ ಸೂರ್ಯ ದೇವರಿಗೆ ಅರ್ಘ್ಯ ಸಮರ್ಪಣೆ ಮಾಡಲಾಯಿತು ನಂತರದಲ್ಲಿ ವೇದಿಕೆಯ ಕಾರ್ಯಕ್ರಮ ನೆರವೇರಿತು.


ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಚಂದ್ರಕಾಂತ ಸಂ. ನಾಗಸಂದ್ರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ

ಅನಾದಿ ಕಾಲದಿಂದಲೂ ಸೂರ್ಯನನ್ನು ಪೂಜಿಸುವ ವಾಡಿಕೆ ಭಾರತದಲ್ಲಿದೆ. ನಮ್ಮ ವೇದ ಉಪನಿಷತ್ತುಗಳಲ್ಲಿಯೂ ಸೂರ್ಯನ ಶಕ್ತಿಯ ಉಲ್ಲೇಖಗಳಿವೆ. ಸೂರ್ಯನ ಉದಯದಿಂದ ವಿಷಕಾರಿ ಕ್ರಿಮಿಗಳು ಸಾವನ್ನಪ್ಪುತ್ತವೆ. ಸೂರ್ಯನ ಕಿರಣಗಳು ಚಿಕಿತ್ಸೆಗೆ ಪೂರಕವಾಗಿವೆ ಎಂಬುದು ವೈಜ್ಞಾನಿಕ ಸಂಶೋಧನೆಗಳಿಂದ ದೃಢಪಟ್ಟಿದೆ. ಈ ಸೂರ್ಯ ಚಿಕಿತ್ಸೆಯು ಆಯುಷ್ ಚಿಕಿತ್ಸಾ ಪದ್ಧತಿಯ ಒಂದು ಭಾಗವೆಂದು ಎಂದು ತಿಳಿಸಿದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದ ಖ್ಯಾತ ಪ್ರಕೃತಿ ಚಿಕಿತ್ಸಾ ತಜ್ಞ ವೈದ್ಯರಾದ ಡಾ. ಗಂಗಾಧರ ವರ್ಮರವರು ಮಾತನಾಡಿ ರಥಸಪ್ತಮಿಯಂದು 108 ಬಾರಿ ಸೂರ್ಯನಮಸ್ಕಾರವನ್ನು ಮಾಡಿರುವುದು ಬಹಳಷ್ಟು ಒಳ್ಳೆಯ ಕಾರ್ಯ ಮಾತ್ರವಲ್ಲದೆ ಆರೋಗ್ಯದ ದೃಷ್ಟಿಯಿಂದ ಬಹಳಷ್ಟು ಒಳ್ಳೆಯದು. ಸೂರ್ಯನ ತತ್ವ, ಉಪಾಸನೆ, ಆಚರಣೆಗಳ ಒಗ್ಗೂಡುವಿಕೆಯನ್ನು ಯೋಗದಲ್ಲಿ ಸೂರ್ಯ ನಮಸ್ಕಾರವೆಂದು ಕರೆಯುತ್ತಾರೆ. ಭಾರತೀಯ ಋಷಿ ಪರಂಪರೆಯು ನೀಡಿರುವ ಕೊಡುಗೆಗಳಲ್ಲಿ ಸೂರ್ಯ ನಮಸ್ಕಾರವೂ ಒಂದು. ಇದು ನಮ್ಮ ಋಷಿ-ಮುನಿಗಳು ಬಹು ಚಾತುರ್ಯದಿಂದ ದೇಹದ ಎಲ್ಲಾ ಭಾಗಗಳಿಗೂ ಅಂದರೆ ಅಂಗುಷ್ಠದಿಂದ ಹಿಡಿದು ಶಿರಸ್ಸಿನವರೆಗೆ ವ್ಯಾಯಾಮ ದೊರೆಯುವಂತೆ ಸಂಶೋಧನೆ ಮಾಡಿ ನೀಡಿರುವ ಯೋಗಾಭ್ಯಾಸದ ವಿಧಾನ, ಇದರ ಜೊತೆಯಲ್ಲಿ ಉದಯಿಸಿ ಬರುತ್ತಿರುವ ವಿಶ್ವಚೇತನನಾದ ಸೂರ್ಯದೇವನ ಮುಂದೆ ನಿಂತು ಬೀಜಾಕ್ಷರ ಮಂತ್ರ ಪಠಣ, ಉಪಾಸನೆ, ಸ್ತೋತ್ರ ಮಾಡುವುದರ ಮೂಲಕ ಸಾಧಕನಿಗೆ ಮನಸ್ಸಿನ ಮೇಲೆ ಹತೋಟಿ ಬರುವಂತೆ ಮಾಡುವುದರೊಂದಿಗೆ ಸೂರ್ಯ ನಮಸ್ಕಾರದ ಅಭ್ಯಾಸವು ದೇಹ ಮತ್ತು ಮನಸ್ಸನ್ನು ಹಿಡಿತದಲ್ಲಿಟ್ಟುಕೊಳ್ಳಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು. ಪ್ರತಿಯೊಬ್ಬರು ಯೋಗ ಸಂಸ್ಕಾರವನ್ನು ಅಳವಡಿಸಿಕೊಂಡರೆ ಉತ್ತಮ ಪ್ರಜೆಯಾಗುವುದು ಮಾತ್ರವಲ್ಲದೆ ಆರೋಗ್ಯಕರ ಜೀವನವನ್ನು ನಡೆಸಲು ಸಾಧ್ಯ ಎಂದರಲ್ಲದೆ ಮೂರು ಮುಖ್ಯವಾದ ಅಂಶಗಳನ್ನು ನಾವೆಲ್ಲರೂ ಆಚರಿಸಲೇಬೇಕು, ಅವುಗಳೆಂದರೆ ಭಗವಂತನಿಗೆ, ಋಷಿಮುನಿಗಳಿಗೆ ಮತ್ತು ಜನ್ಮ ನೀಡಿದ ತಂದೆ-ತಾಯಿಯರಿಗೆ ಯಾವಾಗಲೂ ಕೃತಜ್ಞರಾಗಿರುವುದು ಎಂದು ತಿಳಿಸಿದರು.

## ಫಾಸ್ಟ್ ನ್ಯೂಸ್

### ಫೆ.19 ರಂದು ಶಿವಾಜಿ ಮಹಾರಾಜರ ಜಯಂತಿ



» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ಸಮಾರಂಭವನ್ನು ಇದೇ ಫೆ.19 ರಂದು ಬೆಳಿಗ್ಗೆ 11 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷ ಭಾಗವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ ಗೋವಿಂದಪ್ಪ, ಟಿ. ರಘುಮೂರ್ತಿ, ಡಾ. ಎಂ. ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಮರಾಠ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಸುರೇಶ್ ರಾವ್ ಜಾದವ್, ಕಾರ್ಯದರ್ಶಿ ಜೆ.ಗೋಪಾಲರಾವ್ ಜಾದವ್, ಜೀಜಾಮಾತಾ ಮಹಿಳಾ ಮಂಡಳಿ ಅಧ್ಯಕ್ಷೆ ಜಿ.ಉಷಾ ಬಾಯಿ ಹಾಗೂ ಜಿಲ್ಲೆಯ ಗೌರವಾನ್ವಿತ ಜನಪ್ರತಿನಿಧಿಗಳು, ಮರಾಠ ಸಮಾಜದ ಸಮಸ್ತ ಗೌರವಾನ್ವಿತ ಮುಖಂಡರು, ಗಣ್ಯರು ಆಗಮಿಸಲಿದ್ದಾರೆ.

ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜ್ ಕನ್ನಡ ಪ್ರಾಧ್ಯಾಪಕ ಡಾ. ಸಿ. ಗುರುಸ್ವಾಮಿ ಉಪನ್ಯಾಸ ನೀಡುವರು. ಚಿತ್ರದುರ್ಗದ ಹಿಮಂತರಾಜು ಮತ್ತು ತಂಡದವರಿಂದ ಗೀತಾಗಾಯನ ಪ್ರಸ್ತುತ ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿವಾಜಿ ಜಯಂತಿ

» ದಾವಣಗೆರೆ

ಫೆ.19 ರಂದು ಬೆಳಿಗ್ಗೆ 10 ಗಂಟೆಗೆ ಶ್ರೀದುರ್ಗಾಂಭಿಕಾ ದೇವಸ್ಥಾನದ ಹತ್ತಿರವಿರುವ ಶ್ರೀಛತ್ರಪತಿಶಿವಾಜಿಯವರಪುತ್ಥಳಿಗೆಮಾಲಾರ್ಪಣೆ ಹಾಗೂ ಬೆಳಗ್ಗೆ 11 ಗಂಟೆಗೆ ಶ್ರೀಕೃಷ್ಣ ಕಲ್ಯಾಣ ಮಂಟಪದಲ್ಲಿ ಶ್ರೀಛತ್ರಪತಿ ಶಿವಾಜಿ ಜಯಂತಿ ವೇದಿಕೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

### 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» ಚಿತ್ರದುರ್ಗ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ.ಎಪಿಜೆ ಅಬ್ದುಲ್ ಕಲಾಂ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ಶಾಲೆಗಳಿಗೆ 2024-25ನೇ ಸಾಲಿಗೆ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಸೇವಾಸಿಂಧು ತಂತ್ರಾಂಶದಲ್ಲಿ ಮೂಲಕ ಸಲ್ಲಿಸಬಹುದಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಕೆಯು ಈಗಾಗಲೇ ಫೆ.16 ರಿಂದ ಪ್ರಾರಂಭವಾಗಿದ್ದು, ಮಾರ್ಚ್ 15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಅಬ್ದುಲ್ ಕಲಾಂ ವಸತಿ ಶಾಲೆ, ಮೆದೇಹಳ್ಳಿ, ದೂರವಾಣಿ ಸಂಖ್ಯೆ -7892847359, ಪ್ರಾಂಶುಪಾಲರು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಳ್ಳಕೆರೆ ದೂರವಾಣಿ ಸಂಖ್ಯೆ - 8746863391. ಪ್ರಾಂಶುಪಾಲರು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ದೇವರಕೊಟ್ಟ ದೂರವಾಣಿ ಸಂಖ್ಯೆ - 7760708033. ತಾಲ್ಲೂಕು ವಿಸ್ತರಣಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ-8660935784. ತಾಲ್ಲೂಕು ವಿಸ್ತರಣಾಧಿಕಾರಿಗಳು, ಚಳ್ಳಕೆರೆ ಉಪವಿಭಾಗ  9986781471, ಜಿಲ್ಲಾ ಮಾಹಿತಿ ಕೇಂದ್ರ- ದೂ. ಸಂ: 08194-234836, 9901238248, ತಾಲ್ಲೂಕು ಮಾಹಿತಿ ಕೇಂದ್ರ ಹೊಸದುರ್ಗ- 8152975750. ತಾಲ್ಲೂಕು ಮಾಹಿತಿ ಕೇಂದ್ರ , ಹಿರಿಯೂರು -9964115450. ತಾಲ್ಲೂಕು ಮಾಹಿತಿ ಕೇಂದ್ರ, ಹೊಳಲ್ಕೆರೆ -9901788735, ತಾಲ್ಲೂಕು ಮಾಹಿತಿ ಕೇಂದ್ರ ಚಳ್ಳಕೆರೆ -9916159746, ತಾಲ್ಲೂಕು ಮಾಹಿತಿ ಕೇಂದ್ರ ಮೊಳಕಾಲ್ಮೂರು 9482069786 ಗೆ ಸಂಪರ್ಕಿಸಬಹುದು.

ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗಪುರುಷ ಸವಿತಾ ಮಹರ್ಷಿ: ಎನ್.ಡಿ.ಕುಮಾರ್

# ಸವಿತಾ ಮಹರ್ಷಿ ಜಯಂತಿ ಆಚರಣೆ ಸಮಾರಂಭ

» ಚಿತ್ರದುರ್ಗ

ಸವಿತಾ ಮಹರ್ಷಿಗಳು ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗಪುರುಷ, ಸಮಾಜಮುಖಿಯಾಗಿ ಬೆಳೆದು ದಾರಿದೀಪವಾಗಿದ್ದಾರೆ ಎಂದು ಅಂತರಾಷ್ಟ್ರೀಯ ಕ್ರೀಡಾಪಟು ಹಾಗೂ ಸವಿತಾ ಸಮಾಜ ಹಿಂದುಳಿದ ವರ್ಗಗಳ ವಿಭಾಗ ಅಧ್ಯಕ್ಷ ಎನ್.ಡಿ. ಕುಮಾರ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಸವಿತಾ ಮಹರ್ಷಿ ಜಯಂತಿ ಆಚರಣೆ ಸಮಾರಂಭದಲ್ಲಿ ಸವಿತಾ ಮಹರ್ಷಿ ಅವರ ಕುರಿತು ಉಪನ್ಯಾಸ ನೀಡಿದರು.

ಚತುರ್ವೇದಗಳಲ್ಲಿ ಒಂದಾದ ಸಂಗೀತ ವೇದ ಎಂದೇ ಕರೆಯಲ್ಪಡುವ ಸಾಮವೇದವನ್ನು ರಚಿಸಿದ ಮಹಾನ್ ಬ್ರಹ್ಮಜ್ಞಾನಿ ಸವಿತಾ ಮಹರ್ಷಿ ಎಂದು ಹೇಳಲಾಗುತ್ತದೆ.ಸಾಮವೇದವುಸಂಗೀತದ ಮೂಲಗ್ರಂಥವಾಗಿದ್ದು, ಹಾಗಾಗಿ ನಮ್ಮ ಸವಿತಾ ಸಮಾಜದವರು ಸಂಗೀತ, ವೈದ್ಯ



ವೃತ್ತಿ ಹಾಗೂ ಕ್ಷೌರಿಕ ವೃತ್ತಿಯನ್ನೂ ಮಾಡಿಕೊಂಡು ಬರುತ್ತಿದ್ದಾರೆ. ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು,ಸರ್ವರಿಗೂದಾರಿದೀಪವಾಗಿದ್ದಾರೆ ಎಂದು ಹೇಳಿದರು.

ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಮಾತನಾಡಿ, ಆದರ್ಶ ವ್ಯಕ್ತಿಗಳ ತತ್ವಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ನಿಟ್ಟಿನಲ್ಲಿ ಸರ್ಕಾರದ ವತಿಯಿಂದ ಮಹನೀಯರ ಜಯಂತಿಗಳನ್ನು ಆಚರಿಸಲಾಗುತ್ತಿದ್ದು, ಮಹಾನ್ ವ್ಯಕ್ತಿಗಳ ತತ್ವ,ಸಂದೇಶಗಳು ಸಾರ್ವಕಾಲಿಕವಾಗಿದ್ದು, ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಶ್ರಮಿಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರೇಡ್-2 ತಹಶೀಲ್ದಾರ್ ನಾಗರಾಜ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಸವಿತಾ ಸಮಾಜ ಜಿಲ್ಲಾ ಘಟಕದ ಅಧ್ಯಕ್ಷ ಎನ್.ಚಂದ್ರಶೇಖರ್, ಮುಖಂಡರಾದ ವಿ.ರಂಜಿತ್, ಶ್ರೀನಿವಾಸ್, ಕೆ.ನಾಗರಾಜ್, ಕುಮಾರ್ ಧರ್ಮಣ್ಣ, ಕೆ.ಶ್ರೀನಿವಾಸ್, ಎಸ್. ಮಾರಣ್ಣ, ರಾಜಣ್ಣ, ಕನ್ನಡ ಉಪನ್ಯಾಸಕ ಡಾ.ಬಿ.ಎಂ.ಗುರುನಾಥ್, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು. ಹಿರಿಯೂರಿನ ತ್ರಿವೇಣಿ ಮತ್ತು ಸಂಗಡಿಗರು ಗೀತಗಾಯನ ನಡೆಸಿಕೊಟ್ಟರು.

# ಸಂವಿಧಾನ ಜಾಗೃತಿಗೆ ಬೈಕ್ ರ್‍ಯಾಲಿ

» ಚಿತ್ರದುರ್ಗ

ಚಿತ್ರದುರ್ಗ ನಗರದ ಒನಕೆ ಓಬವ್ವ ವೃತ್ತದಲ್ಲಿ ಸಂವಿಧಾನ ಜಾಗೃತಿ ಜಾಥಾದ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಶನಿವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸ್ಥಳೀಯ ಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನದ ಮಹತ್ವ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ರ್‍ಯಾಲಿ ನಡೆಯಿತು.

ಜಿಲ್ಲಾಪಂಚಾಯಿತಿಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಹೆಲ್ಮೆಟ್ ಧರಿಸಿ, ಖುದ್ದು ಬೈಕ್ ಚಾಲನೆ ಮಾಡಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಸಂವಿಧಾನ ಜಾಗೃತಿ ಜಾಥಾದ ಬೈಕ್ ರ್‍ಯಾಲಿಯ ಮುಂಚೂಣಿಯಲ್ಲಿದ್ದು, ಸಂವಿಧಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿ ಗಮನ ಸೆಳೆದರು.

ಭಾರತದ ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ಆಚರಣೆಯ ಪ್ರಯುಕ್ತ ಜ.26 ರ ಗಣರಾಜ್ಯೋತ್ಸವ ದಿನದಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು "ಸಂವಿಧಾನ ಜಾಗೃತಿ ಜಾಥಾ" ಕ್ಕೆ ಚಾಲನೆ ನೀಡಿದ್ದರು. ಎಲ್‌ಇಡಿ ವಾಹನದೊಂದಿಗೆ ಬುದ್ಧ, ಬಸವ, ಅಂಬೇಡ್ಕರ್ ಪುತ್ಥಳಿಯನ್ನು ಒಳಗೊಂಡಿರುವ ವಿಶೇಷ ವಾಹನವು ಜಾಥಾ ಮೂಲಕ ಜಿಲ್ಲೆಯ ಪ್ರತಿಯೊಂದು ನಗರ, ಪಟ್ಟಣ ಮತ್ತು ಗ್ರಾಮಗಳಲ್ಲಿ ಸಂಚರಿಸಿ ಸಂವಿಧಾನದ ಮಹತ್ವ ಕುರಿತು ಅರಿವು ಮೂಡಿಸುವ ಕಾರ್ಯ ನಡೆಯುತ್ತಿದೆ. ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಪ್ರದರ್ಶಿಸುವ ಎಲ್‌ಇಡಿ ಪರದೆ ಹೊಂದಿರುವ ಸ್ತಬ್ಧಚಿತ್ರವು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಇದೇ ಫೆ.23 ರವರೆಗೆ ಸಂಚರಿಸಲಿದೆ



ಎಂದು ಮಾಹಿತಿ ನೀಡಿದ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಸಂವಿಧಾನದ ಮೌಲ್ಯ, ಆಶಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ಅಭೂತಪೂರ್ವವಾಗಿ ಜರುಗುತ್ತಿದ್ದು, ಎಲ್ಲೆಡೆ ಪೂರ್ಣ ಕುಂಬ ಹೊತ್ತ ಮಹಿಳೆಯರು ಸ್ಥಬ್ಧಚಿತ್ರ ಮೆರವಣಿಗೆಯಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳುತ್ತಿದ್ದಾರೆ. ಸಂವಿಧಾನದ ಮಹತ್ವದ ಕುರಿತು ವಿಶೇಷ ಬೈಕ್ ರ್‍ಯಾಲಿಗಳನ್ನು ಕೂಡ ಆಯೋಜಿಸಲಾಗುತ್ತಿದೆ. ಪ್ರತಿ ಗ್ರಾಮಗಳಲ್ಲಿಯೂ ಆಕರ್ಷಕ ಸಂವಿಧಾನ ಜಾಗೃತಿ ಸ್ಥಬ್ಧಚಿತ್ರ ಜನರ ಮನಸ್ಸನ್ನು ಗೆಲ್ಲುವುದರೊಂದಿಗೆ ಸಂವಿಧಾನ ಮಹತ್ವ ಸಾರುತ್ತಿದೆ. ಸ್ಥಬ್ಧಚಿತ್ರ ಸಾಗುವ ಕಡೆಯಲ್ಲೆಲ್ಲಾ ಜನಸ್ಪಂದನೆ ಅಭೂತ ಪೂರ್ವವಾಗಿದೆ ಎಂದು ತಿಳಿಸಿದ ಅವರು, ಜಾಗೃತಿ ಜಾಥಾ ಸಂದರ್ಭದಲ್ಲಿಯೇ ಗ್ರಾಮ, ಪಟ್ಟಣಗಳಲ್ಲಿ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸುವ ಕಾರ್ಯ ವಿಶೇಷವಾಗಿ ಜರುಗುತ್ತಿದೆ. ಸಂವಿಧಾನ ಜಾಗೃತಿ ಜಾಥಾ ಸಾಗುವ ಮಾರ್ಗಗಳಲ್ಲಿ ಸಾರ್ವಜನಿಕರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸಂವಿಧಾನದ ಮಹತ್ವ ಅರಿಯುವಂತಾಗಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮನವಿ ಮಾಡಿದರು.

ಸಂವಿಧಾನ ಜಾಗೃತಿ ಜಾಥಾದ ಬೈಕ್ ರ್‍ಯಾಲಿಯು ನಗರದ ಒನಕೆ ಓಬವ್ವ ವೃತ್ತದಿಂದ (ಡಿ.ಸಿ. ಆಫೀಸ್ ಸರ್ಕಲ್) ಪ್ರಾರಂಭಗೊಂಡು, ಮದಕರಿ ನಾಯಕ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಗಾಂಧಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ ಮೂಲಕ ಕನಕದಾಸ ವೃತ್ತ ವರೆಗೆ ತೆರಳಿ, ಪುನಃ ಅದೇ ಮಾರ್ಗದಿಂದ ಚಳ್ಳಕೆರೆ ಟೋಲ್‌ಗೇಟ್ ಚಿತ್ರದುರ್ಗ ಟೌನ್‌ವರೆಗೂ ಸಾಗಿ ಸಮಾಪ್ತಿಗೊಂಡಿತು. ಬೈಕ್ ರ್‍ಯಾಲಿಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಗ್ರಾಮಾಂತರ ಪ್ರೌಢಶಾಲೆಗಳಲ್ಲಿ ಕನ್ನಡಪರ ಚಟುವಟಿಕೆಗಳಿಗೆ ಹೆಚ್ಚು ಅವಕಾಶ ಕಲ್ಪಿಸಬೇಕು: ಶಿವಣ್ಣ



» ಚಳ್ಳಕೆರೆ

ತಾಲ್ಲೂಕಿನ ಸಾಣಿಕೆರೆ ಗ್ರಾಮದ ಮಾರುತಿಪ್ರೌಢಶಾಲೆಯಲ್ಲಿ ಇತ್ತೀಚೆಗೆ ನಡೆದ ಅತ್ಯುತ್ತಮ ಕಥೆ ಸ್ಪರ್ಧೆಯಲ್ಲಿ ವಿಜೇತರಾದ ದಯಾನಂದ, ಲಕ್ಷ್ಮಿ ಇವರಿಗೆ ಬಹುಮಾನ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಹಿರಿಯಪತ್ರಕರ್ತ ಸೊಂಡೆಕೆರೆಶಿವಣ್ಣ, ಇತ್ತೀಚಿನ ದಿನಗಳಲ್ಲಿ ಸಾಹಿತ್ಯಪರ ಚಟುವಟಿಕೆಗಳಲ್ಲಿ ಭಾಗವಹಿಸುವವರ ಸಂಖ್ಯೆ ಕಡಿಕೆಯಾಗುತ್ತಿದೆ. ಕಥೆ, ಕವನ, ಲೇಖನ, ವಿಮರ್ಶಾತ್ಮಕ ಬರವಣಿಗೆಗಳು ಕನ್ನಡ ಸಾಹಿತ್ಯವನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ. ಸಾಹಿತ್ಯಕ್ಕೆ ಸಂಬಂಧಪಟ್ಟ ಕಾರ್ಯಕ್ರಮಗಳನ್ನು ಹೆಚ್ಚು, ಹೆಚ್ಚು ನಡೆಸಬೇಕೆಂದರು.

ಶಾಲೆಯ ಮುಖ್ಯ ಶಿಕ್ಷಕಿ ಕಾವ್ಯ ಮಾತನಾಡಿ, ಪ್ರಸ್ತುತ ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಯಾವ ವಿಷಯವನ್ನು ಅಲಕ್ಷಿಸಬಾರದು. ವಿಶೇಷವಾಗಿ ನಮಗೆ ಬದುಕನ್ನು ಕೊಟ್ಟ ಕನ್ನಡ ಭಾಷೆಯ ಬಗ್ಗೆ ಉದಾಸೀನತೆ ಸಲ್ಲದು. ಸಾಹಿತ್ಯಪರ ಚಟುವಟಿಕೆ ನಡೆಸಲು ಎಲ್ಲರೂ ಸಹಕಾರ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಖಾಸಗಿ ಶಾಲೆಯ ಶಿಕ್ಷಕ ದೊಡ್ಡ ಉಳ್ಳಾರ್ತಿ ಗೌರೀಶ್, ಪತ್ರಕರ್ತ ಬೊಮ್ಮಲಿಂಗಪ್ಪ ಹಾಗೂ ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ವೀರಶೈವ ಧರ್ಮ ಮೆರಗುವಂತೆ ಮಾಡಿದ ಕೀರ್ತಿ ಬಸವಣ್ಣಗೆ

» ದಾವಣಗೆರೆ

ವೀರಶೈವ ಧರ್ಮವನ್ನು ಇಡೀ ಪ್ರಪಂಚಕ್ಕೆ ಪರಿಚಯಿಸಿದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ ಎಂದು ಮಾಜಿ ಸಚಿವರು ಹಾಗೂ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಹೇಳಿದರು.

ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಕರ್ನಾಟಕ ಸಾಂಸ್ಕೃತಿಕ ನಾಯಕರಾದ ಶ್ರೀಜಗಜ್ಯೋತಿ ಬಸವಣ್ಣ ಅವರ ಭಾವಚಿತ್ರ ಅನಾವರಣದ ಸಮಾರಂಭವನ್ನು ಉದ್ಘಾಟಿಸಿ ಮಾತಾನಾಡಿದರು. ಬಸವಣ್ಣನವರು ಬ್ರಾಹ್ಮಣ ಜಾತಿಯಲ್ಲಿ ಹುಟ್ಟಿದರೂ ಕೂಡ, ಅವರಲ್ಲಿರುವ ಕಟ್ಟು ನಿಟ್ಟಿನ ಭಾವನೆ ತೊರೆದು ವೀರಶೈವ ಧರ್ಮವನ್ನು ಅಪ್ಪಿಕೊಂಡು ವೀರಶೈವರ ಉದ್ಧಾರಕ್ಕೆ ಶ್ರಮಿಸಿದರು. ಬಸವಣ್ಣನವರು ಹೆಣ್ಣು ಮಕ್ಕಳು ಮನೆಯ ಒಳಗಡೆ ಇರಬೇಕು ಎಂಬ ಮಾತನ್ನು ಆಡುತ್ತಿದ್ದವರಿಗೆ ಅದನ್ನು ತಪ್ಪು ಎಂದು ತಿಳಿಸಿ ಹೆಣ್ಣು ಮಕ್ಕಳಿಗೆ ಸ್ವಾತಂತ್ರ್ಯವನ್ನು ಕೊಡಿಸಿದರು. ಹೆಣ್ಣು ಮಕ್ಕಳು ಅಷ್ಟೇ ಅಲ್ಲದೇ ಜಾತಿ ರಹಿತ, ವರ್ಗರಹಿತ, ವರ್ಣರಹಿತ ಸಮಾಜ ನಿರ್ಮಾಣಕ್ಕೆ ಪ್ರಾತಿನಿಧ್ಯ ನೀಡಿ ಆಡಳಿತ ನಡೆಸಿದಂತವರು ಬಸವಣ್ಣನವರು.

ಜಿಲ್ಲೆಯಲ್ಲಿ ನಡೆದ ವೀರಶೈವ ಲಿಂಗಾಯತ ಮಹಾಸಭಾ ಅಧಿವೇಶನದಲ್ಲಿ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಬೇಕು ಎಂದು




ಸರ್ಕಾರಕ್ಕೆ ಒತ್ತಾಯಿಸಲಾಗಿತ್ತು. ನಮ್ಮ ಮನವಿ ಸ್ವೀಕರಿಸಿ ಬಸವಣ್ಣ ಸಾಂಸ್ಕೃತಿಕ ನಾಯಕಎಂದುಘೋಷಣೆಮಾಡಿರುವುದು ಸಂತಸ ತಂದಿದೆ. ರಾಜ್ಯ ಮಟ್ಟದ ಸಮಾರಂಭವನ್ನು ಬಸವಕಲ್ಯಾಣದಲ್ಲಿ ನಡೆಯಲಿದೆ ಎಂದ ಅವರು ಅಂಬೇಡ್ಕರ್ ಭವನ ಪ್ರತಿ ಜಿಲ್ಲೆಯಲ್ಲಿ ಮಾಡಲಾಗುತ್ತಿದೆ, ಅದೇ ರೀತಿ ಬಸವ ಭವನ ನಿರ್ಮಾಣ ಮಾಡಬೇಕೆಂದು ಮನವಿ ಮಾಡಿದ್ದೇವೆ ಎಂದರು. ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಮಾತಾನಾಡಿ, ಮಹಾಸಭಾದ ನಿರ್ಣಯದಂತೆ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಸರ್ಕಾರ ಘೋಷಣೆ ಮಾಡಿದೆ. ಬಸವಣ್ಣನವರ ಹಾದಿಯಲ್ಲಿ ನಡೆದರೆ, ಈ ನಾಡು ಶಾಂತಿಯುತ ಸರ್ವಜನಾಂಗದ ನಾಡಾಗುತ್ತದೆ. ಬಸವಣ್ಣನ ಅನುಯಾಯಿಗಳಾದರೆ ಶಾಂತಿ ನೆಲೆಸಿ, ನೆಮ್ಮದಿ ಸಿಗಲಿದೆ. ಬಸವಣ್ಣನವರ ತತ್ವ ಸಿದ್ಧಾಂತ ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ಶಾಂತಿ, ಸಮಾನತೆ ನ್ಯಾಯ ಪಡೆಯಲು ಸಾಧ್ಯವಾಗುತ್ತದೆ.

ಬಸವಣ್ಣನವರ ತತ್ವ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ಕೃತಜ್ಞತೆ ಸಲ್ಲಿಸಿದಂತಾಗುತ್ತದೆ. ಬಸವಣ್ಣ ಎಂದರೆ ಅದು ಕಾಯಕಯೋಗಿ ಬಸವಣ್ಣ, ಇವರ ಹೆಸರು ನಾಮಕರಣ ಮಾಡುವ ಮೂಲಕ ಅನುಯಾಯಿಗಳಾಗಬೇಕು. ಪಠ್ಯಪುಸ್ತಕದಲ್ಲಿ ಬಸವಣ್ಣನವರ ಕುರಿತಂತೆ ಪ್ರತಿದಿನ ಅವಧಿಯ ತರಗತಿ ಮೀಸಲಿರಿಸಲು ಮನವಿ ಮಾಡಬೇಕೆಂದರು. ಹಿಂದೆ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಫೋಟೋ ಅಳವಡಿಸಬೇಕೆಂದು ಆದೇಶ ಮಾಡಲಾಗಿದ್ದು ಈಗ ಭಾವಚಿತ್ರದ ಕೆಳಗೆ ಸಾಂಸ್ಕೃತಿಕ ನಾಯಕ ಎಂದು ಹೆಸರು ನಮೂದಿಸಬೇಕು. ಪೌರಕಾರ್ಮಿಕರಿಗಾಗುತ್ತಿರುವ ಅನ್ಯಾಯವನ್ನುತಡೆಗಟ್ಟಲುಅಧಿವೇಶನದಲ್ಲಿ ಪ್ರಸ್ತಾಪಿಸಿದ್ದು ಅವರಿಗೆ ಕಡಿಮೆ ವೇತನ ಸಿಕ್ಕರೂ ಮನೆಯವರೆಗೆ ಹಣ ತೆಗೆದುಕೊಂಡು ಹೋಗುತ್ತಿಲ್ಲ, ಇದರಿಂದ ಅವರ ಕುಟುಂಬ, ಜೀವನ ಕಷ್ಟಕರವಾಗಿದೆ ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಯವರು ಸುಧಾರಣೆಗೆ ಮುಂದಾಗಬೇಕೆಂದರು. ದಾವಣಗೆರೆ ವಿಶ್ವವಿದ್ಯಾನಿಲಯ ಪ್ರಾಧ್ಯಾಪಕರಾದ ಹೆಚ್.ವಿಶ್ವನಾಥ್ ಉಪನ್ಯಾಸ ನೀಡಿದರು. ಶ್ರೀಬಸವಪ್ರಭು ಸ್ವಾಮಿಜೀಯವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು. ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿ.ಪಂ.ಉಪ ಕಾರ್ಯದರ್ಶಿ ಕೃಷ್ಣನಾಯ್ಕ, ಅಪರ ಜಿಲ್ಲಾಧಿಕಾರಿ ಸೈಯದಾ ಆಫ್ರಿನ್ ಭಾನು ಎಸ್ ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್, ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷರಾಧ ದೇವರಮನಿ ಶಿವಕುಮಾರ್, ಬಸವ ಬಳಗದ ಮಹಾಂತೇಶ್ ಅಗಡಿ, ವಾಮದೇವಪ್ಪ, ಉಪಸ್ಥಿತರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ನಾಗರಾಜ ಅವರು ಸಂವಿಧಾನ ಜಾಗೃತಿ ಜಾಥಾದ ಅಂಗವಾಗಿ ಸಂವಿಧಾನ ಪೀಠಿಕೆ ಓದುವ ಮೂಲಕ ಪ್ರತಿಜ್ಞೆ ಸ್ವೀಕರಿಸಲಾಯಿತು. ವೇದಿಕೆ ಕಾರ್ಯಕ್ರಮ ಮುನ್ನ ಬಸವ, ಬುದ್ಧ, ಅಂಬೇಡ್ಕರ್ ಅವರ ಸಂವಿಧಾನ ಜಾಗೃತಿ ರಥಕ್ಕೆ ಪುಷ್ಪಾರ್ಚನೆ ಮಾಡಲಾಯಿತು.ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವತಿಯಿಂದ ಯುವ ಸಮೃದ್ಧಿ ಸಮ್ಮೇಳ ಬೃಹತ್ ಉದ್ಯೋಗ ಮೇಳದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಜಿಲ್ಲೆಯಲ್ಲಿ 15 ದಿನಗಳಿಂದ ವಿಪತ್ತು ನಿರ್ವಹಣಾ ತರಬೇತಿ ನೀಡಿದ ತರಬೇತುದಾರರಿಗೆ ಅಭಿನಂದನಾ ಪತ್ರವನ್ನು ನೀಡಲಾಯಿತು.

# ಕರ್ನಾಟಕದ ದಲಿತ ಚಳುವಳಿಗೆ 50 ವರ್ಷ

» **ಚಿತ್ರದುರ್ಗ**

ಸಂವಿಧಾನ ಜಾರಿಗೊಳಿಸುವ ಜಾಗದಲ್ಲಿ ಮನುವಾದಿಗಳು ಕುಳಿತಿರುವುದರಿಂದ ಅಪಾಯದಲ್ಲಿರುವ ಸಂವಿಧಾನವನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಶಿವಮೊಗ್ಗದ ಎಂ.ಗುರುಮೂರ್ತಿ ದಲಿತರನ್ನು ಜಾಗೃತಿಗೊಳಿಸಿದರು.

ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿಸಿದ ಕರ್ನಾಟಕದ ದಲಿತ ಚಳುವಳಿಗೆ ಐವತ್ತು ವರ್ಷಗಳ ಸಂಭ್ರಮವನ್ನು ತ.ರಾ.ಸು. ರಂಗಮಂದಿರದಲ್ಲಿ ಶನಿವಾರ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಹುಟ್ಟುಹಾಕುವ ಮುನ್ನ ಪ್ರೊ.ಬಿ.ಕೃಷ್ಣಪ್ಪ ಸಮಾಜವಾದದಲ್ಲಿದ್ದರು. ಅಂಬೇಡ್ಕರ್‌ರವರ ವಾದದಿಂದ ಮಾತ್ರ ದಲಿತರ ಉದ್ದಾರ ಸಾಧ್ಯ ಎನ್ನುವುದನ್ನು ಅರಿತು 1974 ರಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯನ್ನು ಹುಟ್ಟುಹಾಕಿದರು. ಅಂದಿನಿಂದ ಜೀವಿತದ ಕೊನೆಯುಸಿರಿರುವತನಕ ದಲಿತರು, ಹಿಂದುಳಿದವರು, ಶೋಷಿತರು, ಅಲ್ಪಸಂಖ್ಯಾತರ ಪರವಾಗಿ ಹೋರಾಟ ಮಾಡಿಕೊಂಡು ಬಂದ ಪರಿಶುದ್ದ ನಾಯಕ ಪ್ರೊ.ಬಿ.ಕೃಷ್ಣಪ್ಪನವರ ಆಚಾರ, ವಿಚಾರ, ತತ್ವ ಸಿದ್ದಾಂತಗಳ ಮೇಲೆ ದಲಿತರು ನಡೆಯಬೇಕಿದೆ ಎಂದು ಕರೆ ನೀಡಿದರು.

ಪ್ರಗತಿಪರರು, ಬುದ್ದಿಜೀವಿಗಳು ಎನಿಸಿಕೊಂಡ ರಾಜಕಾರಣಿಗಳೆ ಶಿಸ್ತುಬದ್ದ ಸಂಘಟನೆ ಕಟ್ಟಿದ ಪ್ರೊ.ಬಿ.ಕೃಷ್ಣಪ್ಪನವರ ಚಳುವಳಿಯನ್ನು ಹೊಡೆದು ಹಾಕಿದರು. ನಾಲ್ಕು ಜನರನ್ನು ತುಳಿದು ಬೆಳೆಯುವವನು



ನಾಯಕನಾಗುವುದಿಲ್ಲ. ನಾಲ್ಕು ಜನರನ್ನು ಬೆಳೆಸಿ ಬೆಳೆಯುವವನು ನಿಜವಾದ ನಾಯಕ. ಅಂತಹ ಸಾಲಿಗೆ ಸೇರಿದ ಪ್ರೊ.ಬಿ.ಕೃಷ್ಣಪ್ಪನವರಲಿತಾಕತ್ತು, ಗಟ್ಟಿ ಗುಂಡಿಗೆಯಿತ್ತು. ವೈಯಕ್ತಿಕ ಬದುಕನ್ನು ಬದಿಗೊತ್ತಿ ಹೋರಾಟವನ್ನೆತಮ್ಮ ಉಸಿರಾಗಿಸಿಕೊಂಡು ಬಂಡವಾಳಶಾಹಿಗಳು, ಭೂ ಮಾಲೀಕರುಗಳಲ್ಲಿ ನಡುಕ ಹುಟ್ಟಿಸಿದರು. ದಲಿತರಿಗೆನ್ಯಾಯಕೊಡಿಸಬೇಕೆಂದು ಅನೇಕ ಸಮಸ್ಯೆಗಳನ್ನು ಮುಂದಿಟ್ಟುಕೊಂಡರು. ಕೋಲಾರದ ಹುಣಸೆಕೋಟೆಯ ಅನುಸೂಯಮ್ಮನ ಮೇಲೆ ಅತ್ಯಾಚಾರವಾದಾಗಹುಣಸೆಕೋಟೆಯಿಂದ ವಿಧಾನಸೌಧದವರೆಗೆ ಪಾದಯಾತ್ರೆ ನಡೆಸಿದರು. ಚಂದ್ರಗುತ್ತಿಯಲ್ಲಿನ ದಲಿತ ಹೆಣ್ಣು ಮಕ್ಕಳ ಬೆತ್ತಲೆ ಸೇವೆಯನ್ನು ತಡೆದು ಬಟ್ಟೆ ತೊಡಿಸಿ ಮಾನ ಕಾಪಾಡಿದ ಕೀರ್ತಿ ಪ್ರೊ.ಬಿ.ಕೃಷ್ಣಪ್ಪನವರಿಗೆ ಸಲ್ಲಬೇಕು. ಒಂದುವರೆ ವರ್ಷಗಳ ಕಾಲ ನಿರಂತರ ಹೋರಾಟನಡೆಸಿಪಿ.ಟಿ.ಸಿ.ಎಲ್.ಐತಿಹಾಸಿಕ ಕಾಯಿದೆ ಜಾರಿಗೆ ಕಾರಣಕರ್ತರಾದವರು. ಅಂತಹ ಮಹನೀಯರ ಹೆಜ್ಜೆ ಗುರುತಿನಲ್ಲಿ ದಲಿತರು ಸಾಗಬೇಕಿದೆ ಎಂದು ಹೇಳಿದರು.ಬಗರ್‌ಹುಕುಂ ಪದವನ್ನು ಪರಿಚಯಿಸಿದ್ದೆ ಪ್ರೊ.ಬಿ.ಕೃಷ್ಣಪ್ಪ ಎನ್ನುವುದನ್ನು ದಲಿತರು ಮರೆಯಬಾರದು. ವಿದ್ಯಾವಂತರಾಗಿದ್ದ ಅವರು ಹೃದಯವಂತರಾಗಿದ್ದರು. ಅಧಿಕಾರದ ಆಸೆಗೆ ಚಳುವಳಿಯನ್ನು ಬಲಿಕೊಡಲಿಲ್ಲ. ಹೆಂಡ ಬೇಡ ಹೋಬಳಿಗೊಂದು ವಸತಿ ಶಾಲೆಯನ್ನು ತೆರೆಯಿರಿ ಎಂದು ಸರ್ಕಾರದ ಕಣ್ಣು ತೆರೆಸಿದ್ದರು. ನಮ್ಮ ಮಕ್ಕಳು ಈಗ ಓದುತ್ತಿದ್ದಾರೆಂದರೆ ಅದು ಡಿ.ಎಸ್.ಎಸ್.ಕೊಟ್ಟ ಬಳುವಳಿ. ಹೆಂಡತಿ ಶೀಲ ಅನುಮಾನಿಸಿ ಕಾಡಿಗಟ್ಟಿದವನಿಗೆ ಜೈಕಾರ ಹಾಕುವ ವಂಶ ನಮ್ಮದಲ್ಲ. ಮನುಸ್ಮೃತಿ ಸುಟ್ಟುಹಾಕಿ ಸಂವಿಧಾನ ಬರೆದ ಡಾ.ಬಿ.ಆರ್.ಅಂಬೇಡ್ಕರ್ ವಂಶ ನಮ್ಮದು. ಗಂಟೆ ಭಾರಿಸುವವರ ಮಕ್ಕಳು ಸಂವಿಧಾನ ಬದಲಾಯಿಸುವುದಾಗಿ ಹೇಳುತ್ತಿದ್ದಾರೆ. ಸಂವಿಧಾನ ರಕ್ಷಣೆ ಮಾಡಬೇಕಾಗಿರುವವರ ಮಕ್ಕಳು ಗಂಟೆ ಬಾರಿಸುತ್ತಿದ್ದಾರೆ.

ಸಂವಿಧಾನ ಕೇವಲ ಮನುಷ್ಯರಿಗಾಗಿ ಅಷ್ಟೆ ಅಲ್ಲ. ಗಿಡ, ಮರ, ಪ್ರಾಣಿ, ಪಕ್ಷಿಗಳಿಗೂ ಬದುಕುವ ಹಕ್ಕಿದೆ ಎಂದು ಸಂವಿಧಾನದಲ್ಲಿ ಹೇಳಿದೆ. ಜಾತಿ ಮೀರಿ ಅನೇಕ ಚಳುವಳಿಗಳು ರಾಜ್ಯದಲ್ಲಿ ನಡೆಯುತ್ತಿದೆ ಎಂದರೆ ಅದಕ್ಕೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪಾಲು ದೊಡ್ಡದಿದೆ. ರೋಷ, ಆವೇಶ, ಸ್ವಾಭಿಮಾನದ ಕಿಚ್ಚನ್ನು ದಲಿತರು ಬೆಳೆಸಿಕೊಂಡಾಗ ಮಾತ್ರ ನಿಜವಾಗಿಯೂ ಪ್ರೊ.ಬಿ.ಕೃಷ್ಣಪ್ಪನವರಿಗೆ ಗೌರವ ಸಲ್ಲಿಸಿದಂತಾಗುತ್ತದೆ. ಡಿ.ಎಸ್.ಎಸ್.ಜೊತೆ ಕೆಲಸ ಮಾಡುವುದೆಂದರೆ ಸಾವಿನ ಜೊತೆ ಸರಸವಾಡಿದಂತೆ. ಮಾಲೀಕರು, ಬಂಡವಾಳಶಾಹಿಗಳ ವಿರುದ್ದ ನಮ್ಮ ಹೋರಾಟ. ಅಂಬೇಡ್ಕರ್‌ರವರನ್ನು ರಾಜ್ಯದಲ್ಲಿ ಪರಿಚಯ ಮಾಡಿಸಿದ್ದೆ ಪ್ರೊ.ಬಿ.ಕೃಷ್ಣಪ್ಪ ಎಂದು ಸ್ಮರಿಸಿದರು.

ಜೂ.9 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ಪ್ರೊ.ಬಿ.ಕೃಷ್ಣಪ್ಪನವರ ಜನ್ಮದಿನದಂದು ಅನೇಕ ಹಕ್ಕೊತ್ತಾಯಗಳನ್ನು ಸರ್ಕಾರಕ್ಕೆ ಮಂಡಿಸಲಾಗುವುದು. ಅದಕ್ಕಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕರ್ನಾಟಕದ ದಲಿತ ಚಳುವಳಿಗೆ ಐವತ್ತು ವರ್ಷಗಳ ಸಂಭ್ರಮ ಆಚರಿಸುತ್ತಿದ್ದು, ಚಿತ್ರದುರ್ಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ದಲಿತರು ಭಾಗವಹಿಸುವಂತೆ ಮನವಿ ಮಾಡಿದರು.

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ ಮಾತನಾಡಿ ಪ್ರೊ.ಬಿ.ಕೃಷ್ಣಪ್ಪನವರಿಂದ ನನಗೆ ಹೋರಾಟದ ಕಿಚ್ಚು ಹುಟ್ಟಿತ್ತು. ಅಂದಿನಿಂದ ಎಂ.ಜಯಣ್ಣ, ಮುರುಘರಾಜೇಂದ್ರ ಒಡೆಯರ್ ಜೊತೆ ಸೇರಿಕೊಂಡು ಹೋರಾಟಕ್ಕಿಳಿದೆವು. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಕೇವಲ ದಲಿತರಿಗಷ್ಟೆಸಂವಿಧಾನನೀಡಿಲ್ಲ.ಎಲ್ಲಾಜಾತಿ ಧರ್ಮದವರಿಗೂ ಸಮಾನತೆ ಕೊಟ್ಟಿದ್ದಾರೆ. ಚಿತ್ರದುರ್ಗ ಎಂದರೆ ಹೋರಾಟಗಾರರನ್ನು ಕೊಟ್ಟ ಊರು. ಮುಂದಿನ ಪೀಳಿಗೆ ಭವಿಷ್ಯ ರೂಪಿಸಿಕೊಳ್ಳಬೇಕೆಂದರೆ ಪ್ರೊ.ಬಿ.ಕೃಷ್ಣಪ್ಪನವರ ಹಾದಿಯಲ್ಲಿ ಎಲ್ಲರೂ ಸಾಗೋಣ ಎಂದು ಹೇಳಿದರು.

ಸಂಭ್ರಮ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಣ್ಣ ಜೂ.9 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ಪ್ರೊ.ಬಿ.ಕೃಷ್ಣಪ್ಪನವರ ಜನ್ಮದಿನದಂದು ದಲಿತರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಬೇಕು. ಈಗಿನ ಯುವ ಪೀಳಿಗೆ ಪ್ರೊ.ಬಿ.ಕೃಷ್ಣಪ್ಪನವರ ಬಗ್ಗೆ ತಿಳಿಯುವುದು ಅತ್ಯವಶ್ಯಕ. ಆಗ ಮಾತ್ರ ಅವರು ಹುಟ್ಟುಹಾಕಿದ ಚಳುವಳಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದು ತಿಳಿಸಿದರು.

ನಿವೃತ್ತಪ್ರಾಂಶುಪಾಲರಾದ ಭದ್ರಾವತಿಯ ಶಿವಬಸಪ್ಪ ಮಾತನಾಡುತ್ತ ಕರ್ನಾಟಕ ದಲಿತ ಚಳುವಳಿಗೆ ಐವತ್ತು ವರ್ಷಗಳ ಸಂಭ್ರಮ ಹೆಮ್ಮೆ ಪಡುವ ವಿಚಾರ. ಪ್ರೊ.ಬಿ.ಕೃಷ್ಣಪ್ಪನವರು ಹುಟ್ಟು ಹಾಕಿದ ಚಳುವಳಿಯನ್ನು ಹೊಡೆದು ಹಾಕುವ ಕೆಲಸ ಕೆಲವರಿಂದ ನಡೆಯುತ್ತಿದೆ. ಚಿತ್ರದುರ್ಗಕ್ಕೂ, ಕೃಷ್ಣಪ್ಪನವರಿಗೂ, ಡಿ.ಎಸ್.ಎಸ್.ಗೂ ಅವಿನಾಭಾವ ಸಂಬಂಧವಿದೆ. ಕರ್ನಾಟಕ ದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿದ ಪ್ರೊ.ಬಿ.ಕೃಷ್ಣಪ್ಪ ಚಿತ್ರದುರ್ಗ ಜಿಲ್ಲೆಯವರು ಎನ್ನುವುದು ಮತ್ತೊಂದು ವಿಶೇಷ ಎಂದರು.

ಸಂಘಟನೆಗೆ ತ್ಯಾಗ ಮಾಡಿದವರ ದಿಕ್ಕು ತಪ್ಪಿಸುವ ಕುತಂತ್ರ ಕೆಲವರಿಂದ ನಡೆಯುತ್ತಿದೆ. ಅಧಿಕೃತ ಸಂಘಟನೆಗೆ ತೊಂದರೆ ಕೊಡುತ್ತಿರುವವರ ವಿರುದ್ದ ಎಚ್ಚರಿಕೆಯಿಂದಿರಬೇಕೆಂದು ದಲಿತರಲ್ಲಿ ಜಾಗೃತಿ ಮೂಡಿಸಿದರು.ಶಿವಮೊಗ್ಗ ಜಿಲ್ಲಾ ಸಂಚಾಲಕ ಎಂ.ಏಳುಕೋಟಿ, ವೈ.ರಾಜಣ್ಣ, ಕೆ.ಮಲ್ಲೇಶ್, ಹುಲ್ಲೂರು ಕುಮಾರ್, ಶ್ರೀನಿವಾಸ್‌ಮೂರ್ತಿ, ವಿಜಯ್ ಇನ್ನು ಅನೇಕರು ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ವಿಶ್ವಗುರು ಬಸವಣ್ಣನ ಭಾವಚಿತ್ರ ಅನಾವರಣ



» **ಚಿತ್ರದುರ್ಗ**

"ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ" ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿದ್ದು, ಅದರಂತೆ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಶನಿವಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ವಿಶ್ವ ಗುರು ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ನುಡಿದಂತೆ ನಡೆದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ವರ್ಗರಹಿತ, ಜಾತಿರಹಿತ, ಮೌಢ್ಯಗಳಿಲ್ಲದ ವೈಚಾರಿಕತೆ ಸಮಾಜ ಸ್ಥಾಪನೆಯ ಆಶಯದಿಂದ ಅವರು ವಚನಗಳನ್ನು ರಚಿಸಿದರು. ಕಾಯಕ, ದಾಸೋಹ ಬೋಧಿಸಿದ ಬಸವಣ್ಣನವರು ಯಾರು ಕುಳಿತು ತಿನ್ನದೆ ಕಾಯಕದಲ್ಲಿ ತೊಡಗಬೇಕೆಂದು ಪ್ರತಿಪಾದಿಸಿದ್ದರು. ಇಂತಹ ಮಹಾನ್ ವ್ಯಕ್ತಿಯ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗಳು, ಯೋಜನಾ ನಿರ್ದೇಶಕರು, ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ವಾರ್ತಾ ಇಲಾಖೆ: ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣ ಭಾವಚಿತ್ರ ಅನಾವರಣ



» **ಚಿತ್ರದುರ್ಗ**

ಚಿತ್ರದುರ್ಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಶನಿವಾರ "ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಭಾವಚಿತ್ರ ಅನಾವರಣ ಕಾರ್ಯಕ್ರಮ ನಡೆಯಿತು.ಬಸವಣ್ಣನವರ ನೂತನ ಭಾವಚಿತ್ರಕ್ಕೆ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಅವರು ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿಗಳಾದ ಜಿ.ವೆಂಕಟೇಶ್, ಪಿ.ಎಂ.ವೇಣುಗೋಪಾಲ್, ಎಸ್.ಚಂದ್ರಶೇಖರ್ ಅಲ್ಲದೇ ಎಂ.ಜೆ.ಬೋರೇಶ, ಅಂಜಿನಮೂರ್ತಿ, ಅಪ್ರೆಂಟಿಸ್ ತರಬೇತಾರ್ಥಿ ಕಾರ್ತೇಶ್ ಇದ್ದರು.

### ಭಯ ತೊರೆದು ಪರೀಕ್ಷೆಯ ಸಂಭ್ರಮಾಚರಣೆ ಮಾಡಿ- ಆದರ್ಶ ಗೋಖಲೆ



» **ದಾವಣಗೆರೆ**

ಪರೀಕ್ಷೆ ಎಂದರೆ ಭಯಪಡಬಾರದು, ಹಬ್ಬದಂತೆ ಸಂಭ್ರಮಾಚರಣೆ ಮಾಡಬೇಕು ಎಂದು ಉಪನ್ಯಾಸಕರು ಹಾಗೂ ವಾಗ್ಮಿಗಳಾದ ಆದರ್ಶ ಗೋಖಲೆ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ನಗರದ ಸೋಮೇಶ್ವರ ವಿದ್ಯಾಲಯದಲ್ಲಿ "ಮಕ್ಕಳಲ್ಲಿ ಪರೀಕ್ಷಾ ಭಯ ಹೋಗಲಾಡಿಸಲು ಹಾಗೂ ಭವಿಷ್ಯದಲ್ಲಿ ಎದುರಾಗುವ ಸವಾಲುಗಳು, ಜವಾಬ್ದಾರಿಗಳ ನಿರ್ವಹಣೆ" ಎಂಬ ವಿಷಯದ ಕುರಿತು ಉಪನ್ಯಾಸ ನೀಡುವ ಸಂದರ್ಭದಲ್ಲಿ ಈ ವಿಷಯ ತಿಳಿಸಿದರು. 10ನೇ ತರಗತಿ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ಹಾಗೂ ಸಲಹೆ ನೀಡುವ ಉದ್ದೇಶದಿಂದ ಈ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿತ್ತು.ಈ ವೇಳೆ ವಿದ್ಯಾರ್ಥಿಗಳಿಗೆ ನೀವು ಹಬ್ಬಕ್ಕೆ ಯಾವ ರೀತಿ ಸಿದ್ಧತೆ ಮಾಡಿಕೊಳ್ಳುತ್ತಿರೋ ಅದೇ ರೀತಿ ಸಿದ್ಧತೆಯಿಂದ ಸಂಭ್ರಮದಿಂದ ಪರೀಕ್ಷೆಯನ್ನು ಬರೆಯಬೇಕು. ದಿನವೊಂದಕ್ಕೆ 6 ವಿಷಯಗಳಿಂದ 6 ಪ್ರಶ್ನೆಯನ್ನು 12 ಬಾರಿ ನಿರಂತರ ಅಧ್ಯಯನ ಮಾಡಬೇಕು, ಕ್ರಮಬದ್ಧ ವ್ಯಾಯಾಮ ಹಾಗೂ ಯೋಗದಿಂದ ಏಕಾಗ್ರಹತೆಯನ್ನುರೂಢಿಸಿಕೊಳ್ಳಿ,ಕೀಳರಿಮೆಯನ್ನು ತೊರೆದು ಸ್ವ ನಂಬಿಕೆ ಬೆಳಸಿಕೊಳ್ಳಿ, ತನ್ಮೂಲಕ ಪೋಷಕರ, ಶಿಕ್ಷಕರ, ದೇಶದ ಋಣ ಸಂದಾಯಕ್ಕೆ ಸನ್ನದ್ಧರಾಗಬೇಕೆಂದು ತಿಳಿಸಿದರು.ಪರೀಕ್ಷೆ ನಂತರವೂ ಭಾರತದ ಸನಾತನ ಧರ್ಮ, ಸಂಸ್ಕೃತಿ, ಪರಂಪರೆಯನ್ನು ಅಧ್ಯಯನ ಮಾಡಿ, ಅವುಗಳನ್ನು ಮುನ್ನಡೆಸಿಕೊಂಡು ಹೋಗುವ ಸತ್ ಪ್ರಜೆಗಳಾಗಿ ಎಂದು ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

# ಇಂದಿರಾಗಾಂಧಿ ಶಾಲೆ ವಾರ್ಷಿಕೋತ್ಸವ



» **ಚಿತ್ರದುರ್ಗ**

ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳು ಶಿಕ್ಷಣದ ಕಡೆ ಹೆಚ್ಚಿನ ಗಮನ ಕೊಟ್ಟು ಓದಿದಾಗ ಮಾತ್ರ ಜೀವನದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಇಂದಿರಾಗಾಂಧಿ ವಸತಿ ಶಾಲೆ ಪ್ರಾಚಾರ್ಯರಾದ ದುರ್ಗಾನಾಯಕ ತಿಳಿಸಿದರು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ವತಿಯಿಂದ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆ ಪರಿಶಿಷ್ಟ ವರ್ಗ ತುರುವನೂರು ಇದರ ಶಾಲಾ ವಾರ್ಷಿಕೋತ್ಸವ ಹಾಗೂ ಹತ್ತನೆ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ನಗರದ ಹೊರವಲಯ ಸೀಬಾರದ ಸಮೀಪವಿರುವ ಮೇದಾರ ಕೇತೇಶ್ವರ ಮಠದಲ್ಲಿ ಉದ್ಘಾಟಿಸಿ ಮಾತನಾಡಿದರು.1996 ರಲ್ಲಿ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಯನ್ನು ಆರಂಭಿಸಲಾಯಿತು. ರಾಜ್ಯದಲ್ಲಿ 820 ವಸತಿ ಶಾಲೆಗಳಿದ್ದು, ಮಕ್ಕಳಿಗೆ ಉಚಿತ ಪಠ್ಯಪುಸ್ತಕ, ತಿಂಡಿ, ಊಟ, ವಸತಿ, ಸಮವಸ್ತ್ರಗಳನ್ನು ನೀಡಲಾಗುತ್ತಿದೆ. ಖಾಸಗಿ ಶಿಕ್ಷಣ ಸಂಸ್ಥೆಗಳು ಸರ್ಕಾರಿ ಶಾಲೆಗಳಿಗೆ ಪೈಪೋಟಿ ನೀಡುತ್ತಿರುವ ಇಂದಿನ ದಿನಮಾನಗಳಲ್ಲಿ ಮಕ್ಕಳಿಗೆ ಇದು ವರದಾನವಾಗಿದೆ. ಹೋಬಳಿಗೊಂದು ವಸತಿ ಶಾಲೆಗಳನ್ನು ತೆರೆಯಲಾಗಿದೆ. ಇಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಜೀವನದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕೆಂದು ಹೇಳಿದರು.

ಇಮ್ಮಡಿ ಬಸವ ಮೇದಾರ ಕೇತೇಶ್ವರಸ್ವಾಮೀಜಿ ಮಾತನಾಡಿ ಮಕ್ಕಳಿಗೆ ಶಿಕ್ಷಣ ಕೊಡುವುದು ಕೇವಲ ಶಿಕ್ಷಕರ ಜವಾಬ್ದಾರಿ ಎಂದು ತಿಳಿದುಕೊಳ್ಳುವ ಬದಲು ಪೋಷಕರುಗಳು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಬಡತನ ಎನ್ನುವ ಕಾರಣಕ್ಕಾಗಿ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಬೇಡಿ. ಶಿಕ್ಷಣದಿಂದ ಮಾತ್ರ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯ. ಸಂವಿಧಾನದಡಿಅನೇಕಸವಲತ್ತುಗಳಿವೆ.ಎಲ್ಲವನ್ನು ಬಳಸಿಕೊಂಡು ಶಿಕ್ಷಣ ಪಡೆದಾಗ ಜೀವನದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಬಹುದು. ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ಮಕ್ಕಳಿಗೆ ಎಲ್ಲಾ ರೀತಿಯ ಸಲಕರಣೆಗಳಿವೆ. ಗುಣಮಟ್ಟದ ಶಿಕ್ಷಕರುಗಳಿದ್ದಾರೆ. ಪ್ರಯೋಜನ ಪಡೆದುಕೊಳ್ಳುವ ಮನಸ್ಸು ನಿಮ್ಮದಾಗಬೇಕು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಗಣಿತ ಶಿಕ್ಷಕಿ ತಾಸಿನಾಭಾನು, ಶಿಕ್ಷಕರುಗಳಾದ ಸುಮಲತ, ವಿಶ್ವಾಸ್, ಸೈಯದ್ ಸಾಜಿದ್, ರಫಿಕ್, ಮೂರ್ತಿ, ಶೋಭ ವೇದಿಕೆಯಲ್ಲಿದ್ದರು.

ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ಮಕ್ಕಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಹತ್ತನೆ ತರಗತಿ ವಿದ್ಯಾರ್ಥಿಗಳು ಸಂವಿಧಾನದ ಪೀಠಿಕೆ ಓದಿದರು.ಮಕ್ಕಳಿಂದ ಸಾಂಸ್ಕೃತಿಕ ನೃತ್ಯಗಳು ನೆರವೇರಿತು.

# ನಗರದ ಪಾರ್ಶ್ವನಾಥ ಶಾಲೆಯಲ್ಲಿ ಮಕ್ಕಳ ಸಂತೆ



» **ಚಿತ್ರದುರ್ಗ**

ಪಾರ್ಶ್ವನಾಥ ವಿದ್ಯಾಸಂಸ್ಥೆಯಲ್ಲಿ ಎಲ್.ಕೆ.ಜಿ.ಯಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ಇದೆ ಮೊದಲ ಬಾರಿಗೆ ಮಕ್ಕಳ ಸಂತೆಯನ್ನು ಶನಿವಾರ ಏರ್ಪಡಿಸಲಾಗಿತ್ತು.ಶಾಲೆ ಸಭಾಂಗಣ ಹಾಗೂ ಹೊರಗೆ ರಸ್ತೆಯಲ್ಲಿ ಪುಟ್ಟ ಮಕ್ಕಳು ಹಸಿ ತರಕಾರಿ, ಸೊಪ್ಪು, ಹಣ್ಣು, ಪೌಷ್ಠಿಕಾಂಶವುಳ್ಳ ಕಾಳುಗಳನ್ನು ಮಾರಾಟಕ್ಕಿಟ್ಟು ಗಿರಾಕಿಗಳನ್ನು ಕೂಗಿ ಕರೆಯುತ್ತಿದ್ದುದು, ಆಕರ್ಷಣೀಯವಾಗಿತ್ತು. ಚಿಕ್ಕಂದಿನಿಂದಲೇ ಮಕ್ಕಳಿಗೆ ಶಿಕ್ಷಣದ ಜೊತೆ ವ್ಯವಹಾರಿಕ ಜ್ಞಾನ ಮೂಡಿಸುವುದು ಮಕ್ಕಳ ಸಂತೆಯ ಉದ್ದೇಶವಾಗಿತ್ತು. ತಂಪು ಪಾನೀಯ, ಎಳನೀರು, ಟೀ, ಕಾಫಿ, ಬಾದಾಮಿ ಹಾಲು ಕೂಡ ಮಕ್ಕಳ ಸಂತೆಯಲ್ಲಿ ಮಾರಾಟವಾಗುತ್ತಿತ್ತು. ದಾರಿ ಹೋಕರು ಹೆಚ್ಚಿನ ಸಂಖ್ಯೆಯಲ್ಲಿ ಧಾವಿಸಿ ಮಕ್ಕಳ ಸಂತೆಯಲ್ಲಿ ಹಣ್ಣು, ಹೂವು, ಸೊಪ್ಪು, ತರಕಾರಿಗಳನ್ನು ಖರೀಧಿಸಿ ಮಕ್ಕಳನ್ನು ಪ್ರೋತ್ಸಾಹಿಸಿದರು. ಪಾರ್ಶ್ವನಾಥ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಸುರೇಶ್‌ಕುಮಾರ್, ಉಪಾಧ್ಯಕ್ಷ ಉತ್ತಮ್‌ಚಂದ್ ಸುರಾನ, ನಿರ್ದೇಶಕ ಸುರೇಶ್ ಪಟಿಯಾದ್, ಮುಖ್ಯೋಪಾಧ್ಯಾಯಿನಿ ನಾಜಿಮ, ವಿಜಯಲಕ್ಷ್ಮಿ, ಶಿಕ್ಷಕ ವೃಂದ, ಆಡಳಿತ ಮಂಡಳಿ ಹಾಗೂ ಮಕ್ಕಳ ಪೋಷಕರು ಸಂತೆಯನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. 360 ಕ್ಕೂ ಹೆಚ್ಚು ಮಕ್ಕಳು ಸಂತೆಯಲ್ಲಿ ಭಾಗವಹಿಸಿದ್ದರು.

### ಪೋಕ್ಸೋ, ಬಾಲವಿವಾಹ, ಬಾಲನ್ಯಾಯ ವಿಷಯಗಳ ಕುರಿತು ಕಾರ್ಯಾಗಾರ

ದಾವಣಗೆರೆ: ಪೋಕ್ಸೋ ಕಾಯಿದೆ, ಬಾಲ್ಯವಿವಾಹ ಮತ್ತು ಬಾಲನ್ಯಾಯವನ್ನು ಒದಗಿಸಲು ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಿದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವ ಮಕ್ಕಳ ಮೇಲಾಗುವ ಘಟನೆಗಳನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಏರ್ಪಡಿಸಿದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

**ಪ್ರಮುಖ ಸುದ್ದಿ**

# ಸಂವಿಧಾನದ ತಿಳುವಳಿಕೆ ಅಕ್ಷರಭ್ಯಾಸದಲ್ಲಿಯೇ ಬರಬೇಕು

» **ಹೊಸದುರ್ಗ**

ಇಂದಿನ ಶಿಕ್ಷಣ ವ್ಯವಸ್ಥೆ ಬೇರೆಯೇ ರೀತಿಯಲ್ಲಿದೆ. ಇಂತಹದರ ನಡುವೆ ಮಕ್ಕಳಿಗೆ ಅಂಬೇಡ್ಕರ್, ಗಾಂಧೀಜಿ, ನೆಹರು ಹಾಗೂ ಇನ್ನಿತರ ಮಹಾತ್ಮರ ಜೀವನ ಚರಿತ್ರೆ ಮತ್ತು ಚಿಂತನೆಗಳನ್ನು ಹೇಳಿಕೊಡಬೇಕಿದೆ. ಸಂವಿಧಾನದ ಪೀಠಿಕೆ ಮತ್ತು ಮಹತ್ವದ ತಿಳುವಳಿಕೆ ಅಕ್ಷರಭ್ಯಾಸದಲ್ಲಿಯೇ ಬರಬೇಕು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ನಿಗಮದ ಅಧ್ಯಕ್ಷ, ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ತಾಲ್ಲೂಕಿನ ಲಕ್ಕಿಹಳ್ಳಿ ಗ್ರಾಮದಲ್ಲಿ ತಾಲ್ಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ವಿವಿಧ ಇಲಾಖೆ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ



ಸಮಾರೋಪ ಸಮಾರಂಭದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಸಂವಿಧಾನದಿಂದ ನಾವು ಬಹಳಷ್ಟು ಸೌಲಭ್ಯ ಅವಕಾಶಗಳನ್ನು ಪಡೆಯುತ್ತಿದ್ದೇವೆ. ದೇಶದಲ್ಲಿ ಸರ್ವರಿಗೂ ಸಮಪಾಲು, ಸಹಬಾಳ್ವೆ ಎಂಬುದನ್ನು ಸಾರಿದ್ದು ಡಾ. ಬಿ.ಆರ್.ಅಂಬೇಡ್ಕರ್. ಹಿಂದಿನ ಕಾಲದಲ್ಲಿ ಅರಿವು, ಅನ್ನ, ಅಕ್ಷರ ಯಾವುದು ಇರಲಿಲ್ಲ. ಇದನ್ನು ತೊಡೆದು ಹಾಕಲು ಕಟಿಬದ್ಧರಾಗಿ ನಿಂತು ಸಂವಿಧಾನ ಬರೆದರು. ಬಹಳಷ್ಟು ಜನರು ಇನ್ನೂ ಸಂವಿಧಾನವನ್ನೇ ಅರ್ಥೈಸಿಕೊಂಡಿಲ್ಲ. ಇದಕ್ಕೂ ಮೊದಲೇ ಸಂವಿಧಾನ ಬದಲಿಸಿ, ಮತ್ತೆ ರಾಜ ಪ್ರಭುತ್ವವನ್ನು ತರಬೇಕೆಂದು ಹೊರಟಿದ್ದಾರೆ. ಸಂವಿಧಾನ ಜೀವಂತವಾಗಿದ್ದರೆ ಮಾತ್ರ, ಸರ್ವರು ಸಮಾನವಾಗಿ ಬದುಕಲು ಸಾಧ್ಯ. ಸಂವಿಧಾನದ ಆಶಯ ಮರೆತಿರುವ ಬಹಳಷ್ಟು ಜನರು ಇಂತಹ ಕಾಲದಲ್ಲೂ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಸಂವಿಧಾನಜಾರಿಗೆಬಂದು75ವರ್ಷಗಳ ತುಂಬಿರುವ ಈ ಸಂದರ್ಭದಲ್ಲಿ ರಾಜ್ಯ ಸರ್ಕಾರ ಸಂವಿಧಾನ ಪೀಠಿಕೆ, ಆಶಯ ಮತ್ತು ಮಹತ್ವವನ್ನು ಮುಂದಿಟ್ಟುಕೊಂಡು ಜಾಗೃತಗೊಳಿಸುವ ಕೆಲಸಮಾಡುತ್ತಿದೆ. ಎಲ್ಲಾ ರಂಗಗಳನ್ನು ಹಿಂದುಳಿದಿರುವವರು ಮುನ್ನೆಲೆಗೆ ಬರಬೇಕಾದರೆ, ಶಿಕ್ಷಣದಿಂದ ಸಾಧ್ಯ. ಮನುಷ್ಯ ಶಿಕ್ಷಣವಿಲ್ಲದೆ ಬದುಕಲು ಸಾಧ್ಯವಿಲ್ಲ. ಶಿಕ್ಷಣದಿಂದ ಸಮಾನತೆ, ಸ್ವಾಮ್ಯತೆ, ಸಹನೆ, ಶಿಸ್ತು, ಸಾಮಾಜಿಕ ಕಳಕಳಿ ಬೆಳೆಯುತ್ತದೆ ಎಂದು ತಿಳಿಸಿದರು.

ಹೆಬ್ಬಳ್ಳಿಯಿಂದ ಆರಂಭವಾದ ಸಂವಿಧಾನ ಜಾಗೃತಿ ಜಾಥಾ ರತಾಯಾತ್ರೆ 33 ಗ್ರಾಮ ಪಂಚಾಯಿತಿಗಳನ್ನು ತಲುಪಿ ಅಂತಿಮವಾಗಿ ಲಕ್ಕಿಹಳ್ಳಿ ಗ್ರಾಮಕ್ಕೆ ಬಂದಿದೆ. ತಾಲೂಕಿನ ಎಲ್ಲಾ ಗ್ರಾ.ಪಂ ಗಳಲ್ಲಿ ರಥಯಾತ್ರೆಯನ್ನು ಅದ್ದೂರಿಯಾಗಿ ಸ್ವಾಗತಿಸಿಕೊಂಡು, ಗೌರವಯುತವಾಗಿ ಕಳಿಸಿಕೊಟ್ಟಿದ್ದಾರೆ. ಎಲ್ಲಾ ಇಲಾಖೆ ಅಧಿಕಾರಿಗಳು, ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು,ಉಪಾಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿಗಳು ಬಹಳಷ್ಟು ಶ್ರಮಿಸಿದ್ದಾರೆ. ರಥಯಾತ್ರೆ ಯಶಸ್ವಿಯಾಗಲು ಕಾರಣರಾದ ಎಲ್ಲರಿಗೂ ಧನ್ಯವಾದ ಹೇಳಿದರು.

ಪ್ರಾಸ್ತಾವಿಕವಾಗಿ ಮುಖ್ಯ ಶಿಕ್ಷಕ ದಿನೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾ.ಪಂ ಇಓ ಸುನೀಲ್ ಕುಮಾರ್, ಲಕ್ಕಿಹಳ್ಳಿ ಗ್ರಾ.ಪಂ ಅಧ್ಯಕ್ಷೆ ಲಕ್ಷ್ಮೀದೇವಿ ಮುದ್ದಪ್ಪ, ಉಪಾಧ್ಯಕ್ಷ ತಿಮ್ಮಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕಾಳಮ್ಮ, ಶಶಿಧರ್, ಸುತ್ತಮುತ್ತಲ ಗ್ರಾಮಗಳ ನೂರಾರು ಜನರು ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T